ಸಂಪುಟ : 9 ಸಂಚಿಕೆ 34 ಪುಟ : 4 ಬೆಲೆ: 3.00 ರವಿವಾರ ಮಾರ್ಚ್ 5, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 9 Issue : 34 Pages : 4 Price : 3.00 Tuesday March 5 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 5ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಪ್ರಕಟಣೆ ತಿಳಿಸಿದೆ.

ಸ್ಥಳಗಳ ವಿವರ : ವಾರ್ಡ್ ನಂ. 16ರಲ್ಲಿ ಹೊಂಬಳ ನಾಕಾ, ಜನತಾ ಕಾಲೋನಿಯ ಶೌಚಾಲಯದ ಹಿಂದೆ, ಕಟಗಿ ಅಡ್ಡೆ ಕೆಲವು ಉಳಿದ ಭಾಗಗಳು, ವಾರ್ಡ್ ನಂ. 21, 23ರಲ್ಲಿ ಎಲಿಗಾರ ಪ್ಲಾಟ್, ಲಕ್ಷ್ಮೇಶ್ವರ ಲೈನ್, ಜಕ್ಕಲಿಯವರ ಲೈನ್, ಶರಣಪ್ಪ ಪಾಟೀಲ ನಾಗಪ್ಪನ ಕಟ್ಟಿ, ಜಂತ್ಲಿಯವರ ಲೈನ್, ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 16, 18, 19ರಲ್ಲಿ ಮಡಿವಾಳ ದೇವಸ್ಥಾನ ಲೈನ್, ಕುಂಬಾರ ಓಣಿ ಭಾಗ-1, ಭಾಗ-2, ಬಾಗಲಕೋಟಿ ಅಂಬೇಡ್ಕರ್ ನಗರ, ಡೋರಗಲ್ಲಿ, ಕೋನೇರಿ ಹೊಂಡ ಲೈನ್, ಹನುಮಂತ ದೇವರ ಗುಡಿ,

ವಾರ್ಡ್ ನಂ. 6ರಲ್ಲಿ ರೇಣುಕಾಚಾರ್ಯ ಕಲ್ಯಾಣ ಮಂಟಪ್ ಲೈನ್, ಹೊನ್ನಪ್ಪರ ಲೈನ್, ಹನುಮಂತ ದೇವರ ಗುಡಿ, ಬಾಳಿಕಾಯಿವರ ಲೈನ್, ಪಾಟೀಲರ ಲೈನ್,

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಗದಗ ನಗರಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರ ಜಿಲ್ಲಾ ಪ್ರವಾಸ ಕಾರ್ಯಕ್ರಮ ಇಂತಿದೆ.

ಮಾರ್ಚ್ 6ರಂದು ಬೆಳಿಗ್ಗೆ 10.30ಗಂಟೆಗೆ ಬೆಳಗಾವಿಯಿಂದ ಗದುಗಿನ ಸರ್ಕ್ಯೂಟ್ ಹೌಸ್ ಗೆ ಆಗಮಿಸುವರು. ಬೆಳಿಗ್ಗೆ 11.15 ಗಂಟೆಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ 4ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವರು. ನಂತರ ಗದಗನ ಸರ್ಕ್ಯೂಟ್ ಹೌಸ್ ಗೆ ಆಗಮಿಸಿ ಅಲ್ಲಿಂದ ಬೆಳಗಾವಿಗೆ ಪ್ರಯಾಣ ಮಾಡುವರು ಎಂದು ರಾಜ್ಯಪಾಲರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ನಾಳೆ ಸಚಿವ ಪ್ರಿಯಾಂಕ್ ಖರ್ಗೆ ಗದಗ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ಗದಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಇಂತಿದೆ.

ಮಾರ್ಚ್ 6 ರಂದು ಬೆಳಿಗ್ಗೆ 8.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಗದಗಿಗೆ ಆಗಮಿಸುವರು. ಬೆಳಿಗ್ಗೆ 11 ಗಂಟೆಗೆ ನಾಗಾವಿಯ ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಅವರಣದಲ್ಲಿ ಆಡಿಟೋರಿಯಂ ಕೌಶಲ್ಯ ವಿಕಾಸ ಭವನದಲ್ಲಿ ವಿಶ್ವ ವಿದ್ಯಾಲಯದ 4ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಂಜೆ 5 ಗಂಟೆಗೆ ಗದಗಿನಿಂದ ಹುಬ್ಬಳ್ಳಿಗೆ ರಸ್ತೆ ಮೂಲಕ ಪ್ರಯಾಣಿಸುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ನಾಮನಿರ್ದೇಶಿತ ಸದಸ್ಯರಾಗಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ತಾಲೂಕಿನ ಕಾಲಕಾಲೇಶ್ವರ ಗ್ರಾಮದ ಕಾಂಗ್ರೆಸ್ ಮುಖಂಡ, ತಾ.ಪಂ ಮಾಜಿ ಉಪಾಧ್ಯಕ್ಷ ಶಶಿಧರ ಹೂಗಾರ ಅವರನ್ನು ರೋಣ ತಾಲೂಕು ಅಕ್ರಮ-ಸಕ್ರಮ ಸಮಿತಿಯ ನಾಮನಿರ್ದೇಶಿತ ಸದಸ್ಯರನ್ನಾಗಿ ನೇಮಿಸಲಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 5ನೇ ಹಣಕಾಸು ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷರಾದ ಸಿ. ನಾರಾಯಣಸ್ವಾಮಿ ಅವರು ಮಾರ್ಚ್ 5 ರಂದು ಧಾರವಾಡದಿಂದ ಸಂಜೆ 6 ಗಂಟೆಗೆ ಗದಗನ ಆರ್.ಡಿ.ಪಿ.ಆರ್. ವಿಶ್ವ ವಿದ್ಯಾಲಯದ ಗೆಸ್ಟ್ ಹೌಸ್‌ನಲ್ಲಿ ವಾಸ್ತವ್ಯ ಮಾಡುವರು.

ಮಾರ್ಚ್ 6 ರಂದು ಬೆಳಿಗ್ಗೆ 9 ರಿಂದ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 3 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ಜಿಲ್ಲಾ ಪಂಚಾಯತಿಯ ತಾಲೂಕು ಪಂಚಾಯತಿಯ ಮತ್ತು ಪ್ರತಿ ತಾಲೂಕಿನಿಂದ ಆಯ್ದ ಎರಡು ಗ್ರಾಮ ಪಂಚಾಯತಿಗಳ ಅಧಿಕಾರಿ, ಚುನಾಯಿತ ಪ್ರತಿನಿಧಿಗಳು, ಮೇಯರ್ /ಆಡಳಿತಾಧಿಕಾರಿ ಮತ್ತು ಆಯುಕ್ತರು ಗದಗ ನಗರಸಭೆ, ಹಿರಿಯ ಉಪನಿರ್ದೇಶಕರು, ಮುಖ್ಯ ಲೆಕ್ಕಾದಿಕಾರಿ, ಮುಖ್ಯ ಲೆಕ್ಕಪರಿಶೋಧಕರು, ಸ್ಥಳೀಯ ಲೆಕ್ಕ ಪರಿಶೋಧನಾ ವರ್ತುಲ ಗದಗ ಇವರುಗಳೊಂದಿಗೆ ಸಭೆ ನಡೆಸುವರು. ನಂತರ ಧಾರವಾಡಕ್ಕೆ ಪ್ರಯಾಣ ಮಾಡುವರು.

### ಗ್ಯಾರಂಟಿ ಯೋಜನೆಗಳ ಪ್ರದರ್ಶನಕ್ಕೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಚಾಲನೆ

# ಜನಮನ ಸೆಳೆದ ವಸ್ತುಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಹೊಸ ಬಸ್ ನಿಲ್ದಾಣದಲ್ಲಿ ಆಯೋಜಿಸಿರುವ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಏರ್ಪಡಿಸಿದ ಗ್ಯಾರಂಟಿ ಯೋಜನೆಗಳ ವಸ್ತುಪ್ರದರ್ಶನವನ್ನು ಸೋಮವಾರ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಉದ್ಘಾಟಿಸಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಶಕ್ತಿ, ಯುವನಿಧಿ, ಗೃಹ ಜ್ಯೋತಿ, ಅನ್ನಭಾಗ್ಯ ಯೋಜನೆಗಳು ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳ ಮಾಹಿತಿಯನ್ನು ಪ್ರದರ್ಶಿಸಿದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯನ್ನು ಜಿಲ್ಲಾಧಿಕಾರಿಗಳು ಪ್ರಶಂಸಿಸಿದರು. ಮಾರ್ಚ್ 4ರಿಂದ 6ರವರೆಗೆ ಈ ವಸ್ತುಪ್ರದರ್ಶನ ಏರ್ಪಡಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮೀನಾಕ್ಷಿ, ಗಣ್ಯರಾದ ಅಶೋಕ ಮಂದಾಲಿ, ಬಸ್ ನಿಲ್ದಾಣದ ಸಾರಿಗೆ ನಿಯಂತ್ರಕ ವಿ.ಎಫ್. ಜಾಧವ ಹಾಜರಿದ್ದರು.

ವಿವಿಧ ಯೋಜನೆಗಳ ಮಾಹಿತಿ: ಮಹಿಳೆಯರಲ್ಲಿ ಸ್ವಾವಲಂಬನೆ ಹೆಚ್ಚಿಸಲು ಶಕ್ತಿ ಯೋಜನೆಯಡಿ 136 ಕೋಟಿ ಮಹಿಳೆಯರು, ಯುವತಿಯರು ಹಾಗೂ ವಿದ್ಯಾರ್ಥಿನಿಯರು ಉಚಿತ ಪ್ರಯಾಣ ಮಾಡುವುದರ ಮೂಲಕ 'ಶಕ್ತಿ' ಯೋಜನೆ ಮಹಿಳೆಯರ ಸಬಲೀಕರಣಕ್ಕೆ ಮಾದರಿಯಾಗಿದೆ.

ಪ್ರತಿ ಮನೆಯಲ್ಲಿಯೂ ಭಾಗ್ಯದ ಬೆಳಕು ಬೆಳಗಬೇಕು ಎನ್ನುವ ಆಶಯದಂತೆ 'ಗೃಹಜ್ಯೋತಿ' ಯೋಜನೆಯಡಿ ಪ್ರತಿ ಮನೆಗೆ 200 ಯುನಿಟ್‌ವರೆಗೆ ಉಚಿತ ವಿದ್ಯುತ್ ನೀಡುವುದರ ಮೂಲಕ 5 ಕೋಟಿ ಜನರಿಗೆ ಉಚಿತ ವಿದ್ಯುತ್ ಸೌಲಭ್ಯ ಕಲ್ಪಿಸಲಾಗಿದೆ.

ಕರ್ನಾಟಕದ ಮಹಿಳೆಯರು ಸ್ವ-ಸಾಮರ್ಥ್ಯ, ಸ್ವಯಂ ಸ್ಥೈರ್ಯ ಹಾಗೂ ಸ್ವಯಂ ಗೌರವದಿಂದ ಜೀವನ ಸಾಗಿಸಲು ಪ್ರತಿ ಮಾಹೆ ಪ್ರತಿ ಮಹಿಳೆಗೆ ರೂ 200 ರಂತೆ ರೂ 11726 ಕೋಟಿ ರೂಗಳನ್ನು ನೇರವಾಗಿ 1.09 ಕೋಟಿ ಯಜಮಾನಿಯರಿಗೆ ವರ್ಗಾಯಿಸಿ ವಿಶ್ವ ದಾಖಲೆ ನಿರ್ಮಿಸಿದೆ.

ಯುವಕರ ಶ್ರೇಯೋಭಿವೃದ್ಧಿಗಾಗಿ ಯುವನಿಧಿ ಯೋಜನೆಯಡಿ 2023ರಲ್ಲಿ ಉತ್ತೀರ್ಣರಾದ ಪದವೀಧರರು ಹಾಗೂ ಡಿಪ್ಲೋಮಾ ಮುಗಿಸಿದ ನಿರುದ್ಯೋಗಿಗಳಿಗೆ ಅನುಕೂಲವಾಗಿದೆ.

ಜನಸ್ಪಂದನದಿಂದ ಜನರ ಬಳಿಗೆ ಸರ್ಕಾರ ಎನ್ನುವಂತೆ ಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಜಿಲ್ಲಾಧಿಕಾರಿಗಳಿಂದ ಜನತಾ ದರ್ಶನ ಕಾರ್ಯಕ್ರಮದ ಮೂಲಕ ಜನರ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ನೀಡುವುದರ ಮೂಲಕ ಐತಿಹಾಸಿಕ ದಾಖಲೆ ನಿರ್ಮಿಸಲಾಗಿದೆ.

ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಸಲ್ಲಿಕೆಯಾದ 15068 ಕುಂದು-ಕೊರತೆಗಳಲ್ಲಿ 9780 ಕುಂದು-ಕೊರತೆಗಳನ್ನು ವಿಲೇ ಮಾಡಲಾಗಿದೆ. ಪಿಟಿಸಿಎಲ್ ಕಾಯ್ದೆಗೆ ತಿದ್ದುಪಡಿ ಮಾಡುವುದರ ಮೂಲಕ ಸರ್ಕಾರದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಂಜೂರಾದ ಜಮೀನುಗಳಿಗೆ ಅನಧಿಕೃತ ಪರಭಾರೆಯಿಂದ ರಕ್ಷಣೆ ಸೇರಿದಂತೆ ಸಕ್ಷಮ ಪ್ರಾಧಿಕಾರದ ಯಾವುದೇ ಕಾಲಮಿತಿ ಇಲ್ಲದೆ ದೂರು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಕೃಷಿ ಕ್ಷೇತ್ರವನ್ನು ಸುಸ್ಥಿರ ಹಾಗೂ ಲಾಭದಾಯಕವಾಗಿಸುವ ಉದ್ದೇಶದಿಂದ ವಿವಿಧ ರೈತಪರ ಯೋಜನೆಗಳನ್ನು ಒಗ್ಗೂಡಿಸಿ ಕರ್ನಾಟಕ ರೈತ ಸಮೃದ್ಧಿ ಯೋಜನೆ ಜಾರಿ ಮಾಡಲಾಗಿದೆ. ಬೆಂಗಳೂರಿನ ನಿವಾಸಿಗಳಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ 'ನಾಗರಿಕರ ಧ್ವನಿ ಈಗ ಸರ್ಕಾರದ ಧ್ವನಿ' ಎಂಬ ಘೋಷವಾಕ್ಯದೊಂದಿಗೆ ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಯ ಚಿಂತನಶೀಲ ಉಪಕ್ರಮಕ್ಕೆ ಚಾಲನೆ ನೀಡಲಾಗಿದೆ.

ಸಾಮಾಜಿಕ ನ್ಯಾಯದ ಮೂಲ ಹರಿಕಾರನಿಗೆ ಕರ್ನಾಟಕ ಸರ್ಕಾರದ ಗೌರವ ನೀಡಲಾಗಿದೆ. ವಿಶ್ವಗುರು ಶ್ರೀ ಜಗಜ್ಯೋತಿ ಬಸವೇಶ್ವರರು 'ಕರ್ನಾಟಕದ ಸಾಂಸ್ಕೃತಿಕ ನಾಯಕ' ಎಂದು ಘೋಷಣೆ ಮಾಡುವುದರ ಮೂಲಕ ಮಹತ್ತರ ನಿಲುವನ್ನು ತೆಗೆದುಕೊಂಡಿದೆ.

ಗ್ಯಾರಂಟಿ ಯೋಜನೆಗಳು ಸೇರಿದಂತೆ ಸರ್ಕಾರದ ವಿವಿಧ ಮಹತ್ತರ ಯೋಜನೆಗಳ ಮಾಹಿತಿಯನ್ನು ವಸ್ತು ಪ್ರದರ್ಶನದಲ್ಲಿ ಫಲಕಗಳ ಮೂಲಕ ಸಾರ್ವಜನಿಕರಿಗೆ ಮುಕ್ತವಾಗಿ ಪ್ರದರ್ಶಿಸಲಾಯಿತು.

> ಹಸಿವು ಮುಕ್ತ ಕರ್ನಾಟಕವನ್ನಾಗಿಸುವ ರಾಜ್ಯ ಸರ್ಕಾರದ ಮಹತ್ತರ ಯೋಜನೆಯಾದ 'ಅನ್ನಭಾಗ್ಯ'ದಡಿ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು ಉಚಿತ 10 ಕೆ.ಜಿ ಆಹಾರಧಾನ್ಯ ಸೇರಿದಂತೆ ಡಿಬಿಟಿ ಮೂಲಕ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ 5 ಕೆ.ಜಿ. ಅಕ್ಕಿ ಬದಲಿಗೆ ರೂ 170ರಂತೆ 4.02 ಕೋಟಿ ಫಲಾನುಭವಿಗಳಿಗೆ ರೂ 4595 ಕೋಟಿ ವರ್ಗಾಯಿಸುವುದರ ಮೂಲಕ ಬಡ ಕುಟುಂಬದ ಆರ್ಥಿಕ ಹೊರೆಯನ್ನು ಕಡಿಮೆಗೊಳಿಸಿ, ಬಲವರ್ಧನೆಗೆ ಸಹಾಯಕವಾಗಿದೆ.

### ಶಿವಾನಂದ ಬೃಹನ್ಮಠದ ಉತ್ತರಾಧಿಕಾರತ್ವ ವಿವಾದ । ಧಾರವಾಡ ಉಚ್ಚ ನ್ಯಾಯಾಲಯದಲ್ಲಿ ವಿಚಾರಣೆ

# ತೀರ್ಪು ಕಾಯ್ದಿರಿಸಿದ ನ್ಯಾಯಾಲಯ

■ ವಿಜಯಸಾಕ್ಷಿ ಸುದ್ದಿ, ಗದಗ



ಕಳೆದೊಂದು ವರ್ಷದಿಂದ ಶಿವಾನಂದ ಬೃಹನ್ಮಠದಲ್ಲಿ ನಡೆಯುತ್ತಿರುವ ಹಿರಿಯ ಹಾಗೂ ಕಿರಿಯ ಶ್ರೀಗಳ ನಡುವಿನ ಉತ್ತರಾಧಿಕಾರತ್ವ ವಿವಾದದ ಬಗ್ಗೆ ರಾಜ್ಯ ಉಚ್ಚ ನ್ಯಾಯಾಲಯ ತೀರ್ಪು ಕಾಯ್ದಿರಿಸಿತು.

ರಾಜ್ಯ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ರವಿ ಹೊಸಮನಿ ಪೀಠದ ಮುಂದೆ ನಡೆದ ವಿಚಾರಣೆಯಲ್ಲಿ ನ್ಯಾಯಮೂರ್ತಿಗಳು ಎರಡೂ ಕಡೆಯ ವಾದವನ್ನು ಆಲಿಸಿ ತೀರ್ಪನ್ನು ಕಾಯ್ದಿರಿಸಿದರು.

ನಾಡಿನಾದ್ಯಂತ ಲಕ್ಷಾಂತರ ಭಕ್ತರನ್ನು ಹೊಂದಿರುವ ಜಗದ್ಗುರು ಶಿವಾನಂದ ಮಠದಲ್ಲಿ ಕಳೆದೊಂದು ವರ್ಷದಿಂದ ಉತ್ತರಾಧಿಕಾರತ್ವದ ಬಗ್ಗೆ ವಿವಾದ ಪ್ರಾರಂಭವಾಗಿತ್ತು. ಘೋಡಗೇರಿಯ ಕೈವಲ್ಯಾನಂದ ಶ್ರೀಗಳನ್ನು ಶಿವಾನಂದ ಮಠದ ಉತ್ತರಾಧಿಕಾರಿಯನ್ನಾಗಿ ಕಳೆದ ನಾಲ್ಕು ವರ್ಷಗಳ ಹಿಂದೆ ನೇಮಕ ಮಾಡಲಾಗಿತ್ತು. ಉತ್ತರಾಧಿಕಾರಿಯನ್ನಾಗಿ ನೇಮಕ ಮಾಡಿದ ನಂತರ ಸದಾಶಿವಾನಂದ ಭಾರತಿ ಶ್ರೀ ಎಂದು ನಾಮಕರಣ ಮಾಡಲಾಗಿತ್ತು. ಎರಡು ವರ್ಷಗಳ ನಂತರ ಏಕಾಏಕಿ ಮಠದ ಹಿರಿಯ ಶ್ರೀ ಅಭಿನವ ಶಿವಾನಂದ ಶ್ರೀಗಳು ಕಿರಿಯ ಶ್ರೀಗಳನ್ನು ಉತ್ತರಾಧಿಕಾರಿ ಹುದ್ದೆಯಿಂದ ತೆಗೆದು ಹಾಕುವದಾಗಿ ಘೋಷಿಸಿದ್ದರು. ಉಪ ನೋಂದಣಾಧಿಕಾರಿಗಳ ಕಚೇರಿಗೆ ತೆರಳಿ ಉತ್ತರಾಧಿಕಾರಿ ಹುದ್ದೆಯಿಂದ ವಜಾ ಮಾಡಿದ್ದಾಗಿ ದಾಖಲೆಯನ್ನು ನೋಂದಾಯಿಸಿದ್ದರು. ಹಿರಿಯ ಶ್ರೀಗಳ ಈ ಕಾರ್ಯದಿಂದ ಕಿರಿಯ ಶ್ರೀಗಳ ಭಕ್ತರು ತೀವ್ರ ಅಕ್ರೋಶ ವ್ಯಕ್ತಪಡಿಸಿದ್ದರು. ಹಿರಿಯ ಶ್ರೀಗಳ ಕ್ರಮವನ್ನು ಖಂಡಿಸಿ ಕಿರಿಯ ಶ್ರೀಗಳು ಧಾರವಾಡ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆಯನ್ನು ತಂದಿದ್ದರು.

ನ್ಯಾಯಾಲಯದ ಆದೇಶದಲ್ಲಿ ಶಿವರಾತ್ರಿಯಂದು ನಡೆಯುವ ಸಮಾರಂಭದಲ್ಲಿ ಕಿರಿಯ ಶ್ರೀಗಳ ಹಕ್ಕಿಗೆ ಯಾವುದೇ ರೀತಿಯ ಧಕ್ಕೆಯಾಗದಂತೆ ಅವರೊಂದಿಗೆ ಸೇರಿಕೊಂಡು ಜಾತ್ರಾ ಮಹೋತ್ಸವವನ್ನು ಆಚರಿಸುವಂತೆ ನ್ಯಾಯಾಲಯ ಆದೇಶಿಸಿತ್ತು.

ಈ ಹಿನ್ನೆಲೆಯಲ್ಲಿ ಮಠದ ಉಭಯ ಬಣಗಳ ಭಕ್ತರೊಂದಿಗೆ ಜಿಲ್ಲಾ ಪೊಲೀಸ್ ವರೀಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸಂಧಾನ ಸಭೆ ನಡೆಸಿ, ನ್ಯಾಯಾಲಯದ ಆದೇಶವನ್ನು ಉಭಯ ಶ್ರೀಗಳೂ ಪಾಲಿಸಬೇಕು. ಆದೇಶ ಉಲ್ಲಂಘಿಸಿದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸುವದಾಗಿ ಎಚ್ಚರಿಸಿದ್ದರು.

ಹಿರಿಯ ಶ್ರೀಗಳ ವಕೀಲರು ಸೋಮವಾರ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣವನ್ನು ಅಡ್ವಾನ್ಸಮೆಂಟ್ ಅರ್ಜಿ ದಾಖಲಿಸಿ ದಿ.14ರಂದು ನಡೆಯಬೇಕಿದ್ದ ವಿಚಾರಣೆಯನ್ನು ಸೋಮವಾರ ನಡೆಸುವಂತೆ ಪ್ರಾರ್ಥಿಸಿದ್ದರು. ಹಿರಿಯ ಶ್ರೀಗಳ ನ್ಯಾಯವಾದಿಗಳ ಕೋರಿಕೆಯನ್ನು ಮನ್ನಿಸಿದ ನ್ಯಾಯಾಲಯ ವಿಚಾರಣೆ ನಡೆಸಿ ತೀರ್ಪನ್ನು ಕಾಯ್ದಿರಿಸಿದರು.

ನ್ಯಾಯಾಲಯದಲ್ಲಿ ಹಿರಿಯ ಶ್ರೀಗಳ ಪರವಾಗಿ ಜಯಕುಮಾರ ಪಾಟೀಲ, ವಿ.ಎಂ. ಶೀಲವಂತರ, ಶಿವರಾಜ ಬೆಳ್ಳಕ್ಕಿ, ಕಿರಿಯ ಶ್ರೀಗಳ ಪರವಾಗಿ ಹಿರಿಯ ನ್ಯಾಯವಾದಿ ಗಂಗಾಧರ ಗುರುಮಠ, ಶ್ರೀನಂದನ ಪಾಶ್ಚಾಪೂರೆ, ಪಲ್ಲವಿ ಪಾಶ್ಚಾಪೂರೆ ವಾದಿಸಿದರು.

#### ಮಾ.8ರಂದು ರಥೋತ್ಸವ

> ಶಿವಾನಂದ ಬೃಹನ್ಮಠದಲ್ಲಿ ಶಿವರಾತ್ರಿ ಹಬ್ಬದ ಪ್ರಯುಕ್ತ ಮಾ.8ರಂದು ಜಾತ್ರೆ, ರಥೋತ್ಸವ, ಮಾ.9ರಂದು ಅಡ್ಡಪಲ್ಲಕ್ಕಿ ಮಹೋತ್ಸವ ಜರುಗಲಿದೆ.

## ರಾಜ್ಯಮಟ್ಟದ ಖಾಲಿ ಗಾಡಾ ಓಡಿಸುವ ಸ್ಪರ್ಧೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದಿಂದ ಶಿವರಾತ್ರಿ ಹಬ್ಬದ ಪ್ರಯುಕ್ತ ಮಾ.6ರಂದು ರಾಜ್ಯಮಟ್ಟದ ಖಾಲಿ ಗಾಡಾ ಓಡಿಸುವ ಸ್ಪರ್ಧೆ ಆಯೋಜಿಸಲಾಗಿದೆ.

ಪಟ್ಟಣದಿಂದ ದೊಡ್ಡೂರ ರಸ್ತೆಗೆ ಹೊಂದಿಕೊಂಡಿರುವ ಜಮೀನಿನಲ್ಲಿ ಮಂಗಳವಾರ ಬೆಳಿಗ್ಗೆ 8 ಗಂಟೆಗೆ ಸ್ಪರ್ಧೆ ನಡೆಯಲಿದೆ. 1 ನಿಮಿಷದ ಸ್ಪರ್ಧೆ ಇದಾಗಿದ್ದು, ಪ್ರಥಮ ಬಹುಮಾನ ಬೈಕ್, ದ್ವಿತೀಯ ಬಹುಮಾನ 50 ಸಾವಿರ ರೂ, ತೃತೀಯ ಬಹುಮಾನ 40 ಸಾವಿರ, 4 ಮತ್ತು 5ನೇ ಬಹುಮಾನವಾಗಿ 24 ಸಾವಿರ ರೂ ಸೇರಿ ಒಟ್ಟು 18 ಬಹುಮಾನಗಳಿವೆ. ಅತಿಥಿಗಳಾಗಿ ಕೆ.ಈ. ಕಾಂತೇಶ, ಆನಂದ ತಟ್ಟಿ, ಸಮ್ಮೇದ ಗೋಗಿ, ಎಲ್.ಎಸ್. ಅರಳಹಳ್ಳಿ ಸೇರಿ ಹಲವರು ಆಗಮಿಸುವರು ಎಂದು ಸಂಘಟಕರಾದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದ ಸದಸ್ಯರು ತಿಳಿಸಿದ್ದಾರೆ.

### ಕುಂಟೋಜಿ ಗ್ರಾಮದಲ್ಲಿ ಸಾಮೂಹಿಕ ವಿವಾಹ ಕಾರ್ಯಕ್ರಮ

# ಸಾಮೂಹಿಕ ವಿವಾಹಗಳು ಹೆಚ್ಚಲಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ಸಾಮೂಹಿಕ ವಿವಾಹಗಳು ಸಮಾಜವನ್ನು ಒಗ್ಗೂಡಿಸುವದರೊಂದಿಗೆ ಆರ್ಥಿಕ ಹೊರೆ ತಗ್ಗಿಸಿ, ಪ್ರಗತಿಗೆ ಪೂರಕವಾಗುತ್ತದೆ ಎಂದು ಜೀಗೇರಿ ಗ್ರಾಮದ ಗುರುಸಿದ್ದೇಶ್ವರ ಸ್ವಾಮೀಜಿ ಹೇಳಿದರು.

ಸಮೀಪದ ಕುಂಟೋಜಿ ಗ್ರಾಮದ ಶರಣಬಸವೇಶ್ವರರ 59ನೇ ವರ್ಷದ ಪುರಾಣ ಮಂಗಲೋತ್ಸವ, ಜಾತ್ರಾ ಮಹೋತ್ಸವ ನಿಮಿತ್ತ ನಡೆದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಶ್ರೀಗಳು ಆಶೀರ್ವಚನ ನೀಡಿದರು.

ಮದುವೆ ಪ್ರತಿಯೊಬ್ಬರ ಜೀವನದ ಮಹತ್ತರ ಘಟ್ಟವಾಗಿದೆ. ಆದರೆ ಮದುವೆಗಾಗಿ ಅನಗತ್ಯ ಹಣ ವ್ಯರ್ಥ ಮಾಡುವ ಅಗತ್ಯವಿಲ್ಲ. ಸಾಮೂಹಿಕ ವಿವಾಹದಲ್ಲಿ ಸಂಸಾರ ಜೀವನಕ್ಕೆ ಪಾದಾರ್ಪಣೆ ಆದರ್ಶವಾಗಿದ್ದು, ಕುಟುಂಬಕ್ಕೆ ಮಾತ್ರವಲ್ಲದೇ ದೇಶದ ಅಭಿವೃದ್ಧಿಗೂ ಸಹಕಾರಿಯಾಗುತ್ತದೆ. ಮಿತ ಸಂತಾನ, ಮಕ್ಕಳ ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಿ ಎಂದರು.

ಯಲಬುರ್ಗಾ ಶ್ರೀಧರಮುರಡಿ ಹಿರೇಮಠದ ಬಸವಲಿಂಗ ಸ್ವಾಮೀಜಿ ಮಾತನಾಡಿ, ಸಮಾಜದಲ್ಲಿ ಆರ್ಥಿಕ ಹೊರೆಯಿಂದ ಬಳಲುವವರ ಹಿತ ಕಾಯಲು ಹಾಗೂ ನೆಮ್ಮದಿ ಜೀವನ ನಡೆಸಲು ಸಾಮೂಹಿಕ ವಿವಾಹಗಳು ಹೆಚ್ಚಾಗಿ ನಡೆಯಬೇಕು. ಇತ್ತೀಚಿನ ದಿನಗಳಲ್ಲಿ ಸಾಮೂಹಿಕ ವಿವಾಹಗಳ ಸಂಖ್ಯೆ ಕ್ಷೀಣಿಸುತ್ತಿವೆ. ಹೀಗಾಗಿ ಬಡ ಹಾಗೂ ಕೂಲಿಕಾರರಿಗೆ ವಿವಾಹಗಳು ಭಾರವಾಗಿ ಪರಿಣಮಿಸುತ್ತಿವೆ. ಆದ್ದರಿಂದ ಸಮಾಜದಲ್ಲಿನ ಉಳ್ಳವರು ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವ ಮೂಲಕ ಶ್ರೀಸಾಮನ್ಯರ ಕಲ್ಯಾಣಕ್ಕೆ ನೆರವಾಗಬೇಕು. ಅಂದಾಗ ಮಾತ್ರ ಸಮಾಜದಲ್ಲಿನ ಕೀಳರಿಮೆ ಕಣ್ಮರೆಯಾಗಲು ಸಾಧ್ಯ ಎಂದರು.

ಯಲಬುರ್ಗಾ ಸಿದ್ದರಾಮೇಶ್ವರ ಸ್ವಾಮೀಜಿ, ಶಾಸಕ ಜಿ.ಎಸ್. ಪಾಟೀಲ, ಚನ್ನಬಸಯ್ಯ ಕಾರಡಗಿ, ಅಶೋಕ ಹಡಪದ, ಹೇಮಣ್ಣ ಪೂಜಾರ, ವೀರಣ್ಣ ಕಾರಡಗಿ, ಬಾಲಪ್ಪ ಕರಡಿ, ಹನಮಂತ ಪೂಜಾರ, ಹೋಳಿಯಪ್ಪ ಜೂಲಗುಡ್ಡ, ಕಳಕಪ್ಪ ಬಡಗೇರ, ಪ್ರಭಯ್ಯ ಕಾರಡಗಿ, ರವಿ ಚೋಟಿ, ಮುದಕಪ್ಪ ಡೊಣ್ಣೆಗುಡ್ಡ ಸೇರಿದಂತೆ ಇತರರು ಇದ್ದರು.

## ಸಂಪಾದಕೀಯ

# ಲೋಕಸಭೆ ಚುನಾವಣೆ; ಬಿಜೆಪಿಗೆ ಬಿಸಿ ತುಪ್ಪವಾದ ಕರ್ನಾಟಕ

ಕೇಂದ್ರ ಚುನಾವಣಾ ಆಯೋಗ ಲೋಕಸಭೆಯ ದಿನಾಂಕ ಘೋಷಣೆ ಮಾಡದಿದ್ದರೂ ದೇಶದಲ್ಲಿ ಈಗ ಎಂಪಿ ಚುನಾವಣೆಯದ್ದೆ ಚರ್ಚೆ. ಪಕ್ಷಗಳ ಮೈತ್ರಿ, ಅಭ್ಯರ್ಥಿಗಳ ಪಟ್ಟಿ, ಪಕ್ಷಾಂತರಗಳು ಇನ್ನೆರಡು ತಿಂಗಳು ಸರ್ವೆ ಸಾಮಾನ್ಯ ಸಂಗತಿಗಳಾಗಲಿವೆ.

ಅದರಲ್ಲೂ ಆಡಳಿತಾರೂಢ ಬಿಜೆಪಿ ಪ್ರಸಕ್ತ ಲೋಕಸಭೆ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿದೆ. ದೇಶದ ಬೇರೆ ಬೇರೆ ರಾಜ್ಯಗಳಲ್ಲಿ ಯಾರೆಲ್ಲಾ, ಯಾವ ಕ್ಷೇತ್ರದಿಂದ ಸ್ಪರ್ಧಿಸಬೇಕು ಎನ್ನುವ ಪ್ರಾಥಮಿಕ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಆ ಪಟ್ಟಿಯಲ್ಲಿ ಅತಿ ಹೆಚ್ಚು ಸಂಸದರನ್ನು ಹೊಂದಿರುವ ಕರ್ನಾಟಕದ ಹೆಸರು ಮಾತ್ರ ಪ್ರಸ್ತಾಪವಾಗಿಲ್ಲ.

ಹಾಲಿ 34 ಸಂಸದರಿಗೆ ಈ ಬಾರಿ ಟಿಕೆಟ್ ನಿರಾಕರಣೆ ಮಾಡಲಾಗಿದೆ. ಕೇಂದ್ರದ 34 ಸಚಿವರಿಗೂ ಕ್ಷೇತ್ರಗಳ ಹಂಚಿಕೆಯಾಗಿದೆ. ಆದರೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ ಜೋಶಿ ಆದಿಯಾಗಿ ಕರ್ನಾಟಕದ ಲೋಕಸಭೆ ಕ್ಷೇತ್ರಗಳು ಮತ್ತು ಅಭ್ಯರ್ಥಿಗಳ ಹೆಸರು ಪ್ರಸ್ತಾಪವಾಗದೆ ಇರುವುದು ಅಚ್ಚರಿಗೆ ಕಾರಣವಾಗಿದೆ.

ದಕ್ಷಿಣ ಭಾರತದಲ್ಲಿ ಮೊಟ್ಟಮೊದಲ ಬಾರಿಗೆ ಬಿಜೆಪಿಗೆ ಅಧಿಕಾರ ನೀಡಿದ ರಾಜ್ಯ ಕರ್ನಾಟಕ. ಪ್ರಸಕ್ತ ಲೋಕಸಭೆಗೆ ಅತಿ ಹೆಚ್ಚು ಸಂಸದರನ್ನ ನೀಡಿದ ರಾಜ್ಯವು ಕರ್ನಾಟಕ. ಆದರೂ ಕರ್ನಾಟಕದ ಅಭ್ಯರ್ಥಿಗಳ ಪಟ್ಟಿಯ ಬಗ್ಗೆ ಪ್ರಸ್ತಾಪ ಮಾಡದಿರುವುದರ ಹಿಂದೆ ಬಲವಾದ ಕಾರಣವಿದೆ.

ರಾಜ್ಯದಲ್ಲಿ ಬಿ.ಎಸ್. ಯಡಿಯೂರಪ್ಪ ನಂತರ ಪ್ರಬಲ ನಾಯಕತ್ವ ಇಲ್ಲದೇ ಪಕ್ಷ ಒಂದಷ್ಟು ಹಿಡಿತ ಕಳೆದುಕೊಂಡಿದೆ. ವಿಜಯೇಂದ್ರ ಪಕ್ಷದ ರಾಜ್ಯಾಧ್ಯಕ್ಷರಾದರೂ ಕೆಲ ಹಿರಿಯ ನಾಯಕರಿಗೆ ಅಸಮಾಧಾನ ಇದೆ. ಇನ್ನು ಕೆಲ ಕ್ಷೇತ್ರದಲ್ಲಿ ಹಾಲಿ ಸಂಸದರು ಚುನಾವಣೆಯಿಂದ ಹಿಂದೆ ಸರಿದಿದ್ದಾರೆ. ಕೆಲ ಕಡೆ ಬದಲಾವಣೆ ಆಗಬೇಕಿದೆ. ಈ ಎಲ್ಲ ಕಾರಣಕ್ಕೆ ಬಿಜೆಪಿಗೆ ಕರ್ನಾಟಕ ಕಬ್ಬಿಣದ ಕಡಲೆ ಆಗಿರಬಹುದು ಎಂದು ಅಂದಾಜಿಸಲಾಗುತ್ತಿದೆ.

ಆದರೆ ವಾಸ್ತವದಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಗ್ಯಾರಂಟಿ ಕಾರ್ಯಕ್ರಮಗಳ ಮೂಲಕ ಮತ್ತಷ್ಟು ಗಟ್ಟಿಯಾಗಿದೆ. ಲೋಕಸಭೆ ಚುನಾವಣೆಯಲ್ಲಿ ಗ್ಯಾರಂಟಿ ಲಾಭ ಪಡೆಯಲು ಕಾಂಗ್ರೆಸ್ ಸಹ ಇನ್ನಿಲ್ಲದ ಕಸರತ್ತು ನಡೆಸಿದೆ. ಕಾಂಗ್ರೆಸ್ ರಣನೀತಿ ಅರಿತು ಬಿಜೆಪಿ ಹೆಜ್ಜೆ ಇಡಬೇಕಾದ ಅನಿವಾರ್ಯತೆ ಕಾರಣದಿಂದ ಸದ್ಯಕ್ಕೆ ಕರ್ನಾಟಕ ಲೋಕಸಭೆ ಕ್ಷೇತ್ರಗಳ ಕುರಿತಾಗಿ ಚರ್ಚೆ ನಡೆದಿಲ್ಲ. ಬಿಜೆಪಿಗೆ ಒಂದು ರೀತಿ ಕರ್ನಾಟಕ ಬಿಸಿ ತುಪ್ಪವಾಗಿದೆ. ಸದ್ಯಕ್ಕೆ ಘೋಷಣೆ ಮಾಡಿದರು ಕಷ್ಟವೇ ಮಾಡದಿದ್ದರೂ ಮತ್ತಷ್ಟು ಕಷ್ಟವೇ ಎನ್ನುವಂತಾಗಿದೆ.

### ಪರೀಕ್ಷೆ ಒಂದು ಹಬ್ಬ, ಧೃತಿಗೆಡದೇ ಆತ್ಮವಿಶ್ವಾಸದಿಂದ ಎದುರಿಸಿ

# ಜೀವನೋತ್ಸಾಹಕ್ಕಾಗಿ ಪರೀಕ್ಷೆ

ಮಾನವ ಇಂದು ಹಕ್ಕಿಯಂತೆ ಹಾರಬಲ್ಲ, ಮೀನಿನಂತೆ ನೀರಿನಲ್ಲಿ ಈಜಬಲ್ಲ, ಕ್ಷಣಮಾತ್ರದಲ್ಲಿ ಮಂಗಳನ ಅಂಗಳ ತಲುಪಬಲ್ಲ, ಕ್ಷಿಪ್ರಗತಿಯಲ್ಲಿ ಅಂದುಕೊಂಡ ಕಾರ್ಯವನ್ನು ಮಾಡಬಲ್ಲ. ಈ ಎಲ್ಲ ಸಾಧ್ಯತೆಗಳಿಂದ ಅಂಗೈಯಲ್ಲಿಯೇ ಪ್ರಪಂಚವನ್ನು ನೋಡುವ ಉತ್ಸಾಹದಲ್ಲಿದ್ದಾನೆ. ಇಂತಹ ಕಾಲಘಟ್ಟದಲ್ಲಿರುವ ನಾವು ಪ್ರತಿಯೊಂದನ್ನು ಸ್ಪರ್ಧಾತ್ಮಕವಾಗಿ ಎದುರಿಸಬೇಕಾಗುತ್ತದೆ. ಯಾಕೆಂದರೆ ಇದು ಸ್ಪರ್ಧಾತ್ಮಕ ಯುಗ, ಸ್ಪರ್ಧೆಗೆ ಅಣಿಯಾಗುವುದು ಅನಿವಾರ್ಯ. ಸ್ಪರ್ಧೆ ಅಂದಮೇಲೆ ಸೋಲು–ಗೆಲುವು ಸಹಜವೇ. ಏನೇ ಇರಲಿ ಪಾಲ್ಗೊಳ್ಳುವುದು ಮುಖ್ಯ. 'ಗೆದ್ದರೆ ಸಂತೋಷ, ಸೋತರೆ ಅನುಭವ' ಎನ್ನುವಂತೆ ಪರೀಕ್ಷೆಯನ್ನು ಒಂದು ಹಬ್ಬವಾಗಿ ಪರಿಗಣಿಸೋಣ. ಈಗಾಗಲೇ ಪ್ರಾಥಮಿಕ ಹಂತದಿಂದಲೇ ಸಾಕಷ್ಟು ಪರೀಕ್ಷೆಗಳನ್ನು ಬರೆದು ಎದುರಿಸಿದ್ದೇವೆ. ಇದು ಕೂಡ ಹಾಗೇನೇ ಎಂದು ಭಾವಿಸಿಕೊಂಡು ಯಾವುದೇ ಅಧೈರ್ಯಕ್ಕೆ ಒಳಗಾಗದೆ, ಭಯ, ಆತಂಕ, ಒತ್ತಡಗಳಿಂದ ಹೊರಬಂದು ಉತ್ಸಾಹ ಉಲ್ಲಾಸದಿ ಜೀವನೋತ್ಸಾಹಕ್ಕಾಗಿ ಪರೀಕ್ಷೆಗೆ ಸಿದ್ಧರಾಗೋಣ, ನಿರ್ಭೀತರಾಗಿ ಬರೆಯೋಣ.

ಹೇಳಿ ಕೇಳಿ ಇದು ಸ್ಪರ್ಧಾತ್ಮಕ ಯುಗ, ಕಂಪ್ಯೂಟರ್ ಯುಗ, ಮೊಬೈಲ್ ಯುಗ, ಅದೆಲ್ಲಕ್ಕೂ ಮಿಗಿಲಾಗಿ ಪರ್ಸೆಂಟೇಜ್ ಯುಗ. ವಾಸ್ತವದಲ್ಲಿ ನಾ ಮೇಲು ತಾ ಮೇಲು ಎನ್ನುವಂತೆ ಜಿದ್ದಿಗೆ ಬಿದ್ದು ಗೆದ್ದು ನಿಲ್ಲುವುದೇ ಜೀವನೋತ್ಸಾಹದ ಪರೀಕ್ಷೆ. ಪ್ರತಿಯೊಬ್ಬರಿಗೂ ಪರೀಕ್ಷೆ ಎನ್ನುವ ಹೆಸರನ್ನು ಕೇಳಿದ ಕೂಡಲೇ ಮನದ ಮೂಲೆಯಲ್ಲಿ ದುಗುಡ, ಗಾಬರಿ, ಭಯ ಆವರಿಸಿಕೊಳ್ಳುತ್ತದೆ. ಪರೀಕ್ಷೆಗಳಿಗೆ ಏಕೆ ಹೆದರಬೇಕು. ವರ್ಷವಿಡೀ ಶ್ರದ್ಧೆಯಿಂದ ಅಭ್ಯಾಸಗೈದ ಸಂಗತಿಗಳನ್ನು ಹೊರ ಹಾಕುವುದೇ ಪರೀಕ್ಷೆ. ನಾವು ಎಷ್ಟು ಓದಿದ್ದೇವೆ, ಏನು ಕಲಿತಿದ್ದೇವೆ, ಹೇಗೆ ಸಿದ್ಧತೆ ಮಾಡಿಕೊಂಡಿದ್ದೇವೆ ಎನ್ನುವುದು ಮುಖ್ಯವಲ್ಲ. ಮೂರು ಗಂಟೆಯ ಅವಧಿಯಲ್ಲಿ ಕಲಿತದ್ದನ್ನು ಹೇಗೆ ಉತ್ತರಿಸಬೇಕು ಎನ್ನುವುದು ತುಂಬಾ ಅವಶ್ಯಕ. ಬರೆಯುವ ಕಲೆಯನ್ನು ಕರಗತ ಮಾಡಿಕೊಂಡಿದ್ದರೆ ಪರೀಕ್ಷೆ ಎನ್ನುವುದು ನಿಜಕ್ಕೂ ಹಬ್ಬವೇ ಸರಿ. ಯಾವ ಪ್ರಶ್ನೆಗಳಿಗೆ, ಎಷ್ಟು ಅಂಕಗಳಿಗೆ, ಹೇಗೆ ಬರೆಯಬೇಕು ಎಂಬ ವಿಧಾನ ತಿಳಿದಿದ್ದರೆ ಉತ್ತರ ಪತ್ರಿಕೆಯಲ್ಲಿ ಲೀಲಾಜಾಲವಾಗಿ



ಉತ್ತರಿಸಬಹುದು.

ಪರೀಕ್ಷಾ ದಿನಗಳಿಗಾಗಿ ಎದುರು ನೋಡುತ್ತಿರುವ ವಿದ್ಯಾರ್ಥಿಗಳು ತಿಳಿದಿರಬೇಕಾದ ಪ್ರಮುಖ ಅಂಶಗಳು.

* ಆತ್ಮವಿಶ್ವಾಸವೇ ಯಶಸ್ಸಿನ ಕೀ.
* ದೃಢವಾದ ಸಂಕಲ್ಪ ಹೊಂದಿರಬೇಕು.
* ನಾನು ಎಲ್ಲವನ್ನೂ ಚೆನ್ನಾಗಿ ಓದಿಕೊಂಡಿದ್ದೇನೆ ಎಂಬ ಭಾವನೆ ಇರಲಿ.
* ಎಲ್ಲ ಪ್ರಶ್ನೆಗಳಿಗೂ ಸಮರ್ಪಕವಾಗಿ ಉತ್ತರಿಸಬಲ್ಲೆ ಎಂಬ ಸಕಾರಾತ್ಮಕ ಚಿಂತನೆ ಇರಲಿ.
* ಉತ್ತರಗಳು ಸ್ಫುಟವಾಗಿ, ಸ್ಪಷ್ಟವಾಗಿರಲಿ.
* ಕೇಳಿದ ಪ್ರಶ್ನೆಗಳಿಗೆ ನೇರ ಉತ್ತರವಿರಲಿ.
* ಪ್ರಮುಖ ಅಂಶಗಳಿಗೆ ಅಡಿ (ಅಂಡರ್ ಲೈನ್) ಗೆರೆ ಹಾಕಿರಿ.
* ಪ್ರಶ್ನೆಗಳ ಸಂಖ್ಯೆಗಳನ್ನು ಸರಿಯಾಗಿ ನಮೂದಿಸಿರಿ.
* ಉತ್ತರಗಳು ಪೂರ್ಣ ವಾಕ್ಯದಲ್ಲಿರಲಿ.
* ಉತ್ತರಗಳು ಅನುಕ್ರಮ ಇಲ್ಲವೇ ಕ್ರಮಬದ್ಧವಾಗಿರಲಿ.
* ವಿನಾಕಾರಣ ಚಿತ್ ಕಾಟ್ ಮಾಡಬೇಡಿ.
* ಪರೀಕ್ಷಾ ದಿನಗಳಲ್ಲಿ ಆರೋಗ್ಯದ ಕಾಳಜಿ ಇರಲಿ.
* ಬರೆವಣಿಗೆ ಶೈಲಿ ಆದಷ್ಟು ಒಂದೇ ರೀತಿಯಾಗಿರಲಿ.
* ಸಮಯಕ್ಕೆ ಸರಿಯಾಗಿ ಪರೀಕ್ಷೆ ಬರೆಯಬಲ್ಲೆ ಎಂಬ ವಿಶ್ವಾಸವಿರಲಿ.
* ಪರೀಕ್ಷಾ ದಿನಗಳಲ್ಲಿ ಕರಿದ ತಿಂಡಿ, ಬೇಕರಿ ತಿನಿಸು, ಫಾಸ್ಟ್ ಫುಡ್, ಜಂಕ್ ಫುಡ್ ಆಹಾರ ಸೇವನೆಯಿಂದ ದೂರವಿರಿ.
* ಬೇಸಿಗೆ ದಿನಗಳಾದ್ದರಿಂದ ಕುಡಿಯುವ ನೀರಿನ ಬಾಟಲ್ ಇರಲಿ.
* ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಪರೀಕ್ಷಾ ಕೇಂದ್ರದಲ್ಲಿರಿ.
* ಪ್ರವೇಶ ಪತ್ರ ಮತ್ತು ಪರೀಕ್ಷಾ ಸಾಮಗ್ರಿಗಳನ್ನು ನೀಟಾಗಿ ಜೋಡಿಸಿಕೊಳ್ಳಿ.
* ನಿಮ್ಮ ಉತ್ತರ ಮೌಲ್ಯಮಾಪಕರ ಗಮನ ಸೆಳೆಯುವಂತಿರಲಿ.

ಓದಿದ ವಿಷಯವನ್ನು ಪುನರ್ಮನನ ಮಾಡಿಕೊಂಡು ಆತ್ಮವಿಶ್ವಾಸದಿಂದ ಪರೀಕ್ಷೆಯನ್ನು ಬರೆಯೋಣ. ಪರೀಕ್ಷೆಯ ಬಗ್ಗೆ ಈಗಾಗಲೇ ಸಾಕಷ್ಟು ಜನರು ಊಹಾಪೋಹಗಳನ್ನು ಸೃಷ್ಟಿಸಿ ಮನಸ್ಸಿನಲ್ಲಿ ಭಯದ ಬೀಜವನ್ನು ಬಿತ್ತಿರುತ್ತಾರೆ. ಅದ್ಯಾವುದಕ್ಕೂ ಎದೆಗುಂದದೆ, ಅಂಜದೆ, ಅಳುಕದೆ ಉಲ್ಲಾಸಭರಿತರಾಗಿ ಪರೀಕ್ಷೆಗೆ ಸಿದ್ದರಾಗೋಣ. ವರ್ಗ ಕೋಣೆಗಳಲ್ಲಿ ಅಧ್ಯಾಪಕರು ಬೋಧಿಸಿದ ಪಾಠ ಪ್ರವಚನಗಳನ್ನು ನೆನಪಿಸಿಕೊಂಡು ಉತ್ತರಿಸಬೇಕು. ಒಂದು ಪರೀಕ್ಷೆ ಮುಗಿದ ಬಳಿಕ ಯಾವುದೇ ಕಾರಣಕ್ಕೂ ಆ ಪರೀಕ್ಷೆಯ ಕುರಿತು ತಮ್ಮ ಸ್ನೇಹಿತರ ಜೊತೆಗೆ ಯಾವುದೇ ತರಹದ ಚರ್ಚೆಗೆ ಅವಕಾಶ ನೀಡಬೇಡಿ. ಯಾಕೆಂದರೆ ನೀವು ಬರೆದ ಉತ್ತರಗಳು ಸರಿಯೋ ತಪ್ಪೋ....ಪರೀಕ್ಷೆ ಮುಗಿದು ಹೋಗಿರುತ್ತದೆ. ಚರ್ಚೆಯ ಬಳಿಕ ಬರೆದ ಉತ್ತರ ತಪ್ಪಾಗಿದ್ದರೆ ಮುಂದಿನ ಪರೀಕ್ಷೆಯ ಮೇಲೆ ಪರಿಣಾಮ ಬೀರುತ್ತದೆ. ಬೇಕಿದ್ದರೆ ಎಲ್ಲಾ ಪರೀಕ್ಷೆಗಳು ಮುಗಿದ ತದನಂತರವೇ ತೆರೆದು ನೋಡಿ, ಅಲ್ಲಿಯವರೆಗೂ ಪ್ರಶ್ನೆ ಪತ್ರಿಕೆಗಳ ಅವಲೋಕನ ಮಾಡುವುದು ಸರಿಯಲ್ಲ. ಪರೀಕ್ಷೆಯ ಬಗ್ಗೆ ಸಾಕಷ್ಟು ಮುನ್ನೆಚ್ಚರಿಕೆಯನ್ನು ವಹಿಸಿ ಬಹಳಷ್ಟು ಆನಂದದಿಂದ ಒಂದು ಹಬ್ಬದಂತೆ ಪರೀಕ್ಷೆಯನ್ನು ಯಶಸ್ವಿಯಾಗಿ ಬರೆಯೋಣ. ಏನಂತೀರಾ?!



– ಈಶ್ವರ ಕುರಿ (ಜಕ್ಕಲಿ)

# ದೈಹಿಕ ನ್ಯೂನತೆಯ ಮಕ್ಕಳ ಸಂಖ್ಯೆ ಕಡಿಮೆಯಾಗಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಕುಟುಂಬ, ಸಮಾಜದಲ್ಲಿ ಅಂಗವಿಕಲತೆ, ದೈಹಿಕ ನ್ಯೂನ್ಯತೆಗಳಿರುವ ಮಕ್ಕಳ ಸಂಖ್ಯೆ ಇಳಿಮುಖವಾಗಿ ಸರ್ವ ಮಕ್ಕಳು ಸದೃಢವಾಗಲಿ ಎಂದು ಕರ್ನಾಟಕ ರಾಜ್ಯ ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಉಪಕುಲಪತಿ ವಿಷ್ಣುಕಾಂತ ಚಟಪಲ್ಲಿ ಅಭಿಪ್ರಾಯಪಟ್ಟರು.

ನಗರದ ಸೇವಾ ಭಾರತಿ ಟ್ರಸ್ಟ್‌ನ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯ ವಾರ್ಷಿಕೋತ್ಸವದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಹುಬ್ಬಳ್ಳಿ ಸೇವಾ ಭಾರತಿ ಟ್ರಸ್ಟ್‌ನ ಅಧ್ಯಕ್ಷ ಪೂರ್ಣಚಂದ್ರರಾವ್ ಘಂಟಸಾಲ ಹಾಗೂ ಸೇವಾ ಭಾರತಿ ಟ್ರಸ್ಟ್‌ನ ವಿಶ್ವಸ್ಥ ಭರತ ಜೈನ್ ಮಾತನಾಡಿ, ಸರಕಾರದ ಅನುದಾನವಿಲ್ಲದೆ, ಸರ್ವ ದಾನಿಗಳ ಸಹಕಾರದಿಂದ ಈ ಕಾರ್ಯ ಸಾಗಿ ಬಂದಿದೆ. ಸೇವಾ ಮನೋಭಾವದಲ್ಲೇ ಸಂತೃಪ್ತಿಯನ್ನು ಕಾಣುವ ಕಾರ್ಯ ಇದಾಗಿದೆ ಎಂದರು.

ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯ ಅಧ್ಯಕ್ಷ ಪ್ರೊ. ತುಕಾರಾಮಸಿಂಗ್ ಜಮಾದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಆಡಳಿತ ಮಂಡಳಿಯ ಸದಸ್ಯ ಡಾ.ಉಮೇಶ ಹಾದಿ ಸ್ವಾಗತಿಸಿ ಪರಿಚಯಿಸಿದರು. ಕಾರ್ಯದರ್ಶಿ ಜಯರಾಜ ಮುಳಗುಂದ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲೆಯ ಮುಖ್ಯೋಪಾಧ್ಯಾಯ ಮಲ್ಲಪ್ಪ ಹಳ್ಳಿ ನಿರೂಪಿಸಿದರು. ಬಸವರಾಜ ಪಟ್ಟಣಶೆಟ್ಟಿ ವಂದಿಸಿದರು.

ಸಮಾರಂಭದಲ್ಲಿ ಶಾಲಾ ಆಡಳಿತ ಮಂಡಳಿಯ ಸದಸ್ಯರಾದ ಜೀತೇಂದ್ರ ಶಹಾ, ಬಸವರಾಜ ನಾಗಲಾಪೂರ, ಉಮಾಕಾಂತಸಾ ಮೇರವಾಡೆ, ಲಲಿತ್ ಜೈನ್, ಪ್ರಕಾಶ ವೈಲಾಯ್, ಜಯಪ್ರಕಾಶ ಭಜಂತ್ರಿ ಅಲ್ಲದೆ ಮಂಜುನಾಥ ಚನ್ನಪ್ಪನವರ, ಮಲ್ಲಿಕಾರ್ಜುನ ಬೆಲ್ಲದ, ಅಮರ ಓರಾ, ಶಿಕ್ಷಕ ಸಿಬ್ಬಂದಿಗಳಾದ ಜಗದೀಶ ಹಡಪದ, ಜಯಶ್ರೀ ಭಾವರೆ, ರೇಣುಕಾ ದಾಸರ, ವೀಣಾ ಕೊಲ್ಲಾಪುರೆ, ಸಿಬ್ಬಂದಿ ಮಲ್ಲಿಕಾರ್ಜುನ ನಾಗಲಾಪೂರ, ಆನಂದ ಕಬಾಡಿ ಸೇರಿದಂತೆ ಪಾಲಕ–ಪೋಷಕರು ಪಾಲ್ಗೊಂಡಿದ್ದರು.

### ಅಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಶ್ರೀಗಳು

# ಮನುಷ್ಯನಿಗೆ ಜ್ಞಾನ ಬಹಳ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ವಜ್ಞ ನಮ್ಮ ನಾಡಿನ ಒಬ್ಬ ಶ್ರೇಷ್ಠ ಕವಿ. ಸರ್ವಜ್ಞನು ನೇರ–ನಿಷ್ಠುರ ನುಡಿಗಳಿಂದ ಈ ಸಮಾಜದ ಅಜ್ಞಾನ, ಮೌಢ್ಯಗಳನ್ನು ಖಂಡಿಸುವ ಕೆಲಸ ಮಾಡಿದ್ದಾನೆ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ಮಾತನಾಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2682ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಸರ್ವಜ್ಞನ ವಚನಗಳನ್ನು ಬೆಳಕಿಗೆ ತಂದವರು ರೆವರೆಂಡ್ ಉತ್ತಂಗಿ ಚನ್ನಪ್ಪನವರು. ನಮ್ಮ ಕನ್ನಡ ಸಾಹಿತ್ಯದ ಮುಕುಟಮಣಿ ಸರ್ವಜ್ಞನ ವಚನಗಳು. ಮನುಷ್ಯನಿಗೆ ಜ್ಞಾನ ಬಹಳ ಮಹತ್ವದ್ದು. ಜ್ಞಾನದಿಂದ ಮಾತ್ರ ಮೋಕ್ಷ ಸಾಧ್ಯ. ಜ್ಞಾನ ಇರದೆ ಇದ್ದರೆ ಎಲ್ಲವೂ ನಿರರ್ಥಕ. ಸರ್ವಜ್ಞನ ವಚನಗಳಲ್ಲಿ ಶಾಂತಿ, ಸಮಾಧಾನ, ಸರ್ವಧರ್ಮ ಸಮನ್ವಯತೆ, ಜ್ಞಾನದಜ್ಯೋತಿ ಅನೇಕ ಮಹತ್ವದ ವಿಷಯಗಳು



ಅಡಗಿವೆ ಎಂದರು.

ಕಾರ್ಯನಿರತ ಪತ್ರಕರ್ತರ ಸಂಘದಿಂದ 2022–23ನೇ ಸಾಲಿನಲ್ಲಿ ಪ್ರಶಸ್ತಿ ಪಡೆದ ನಿಮಿತ್ತ ವೆಂಕಟೇಶ ಇಮ್ರಾಪೂರ, ಮಾಳಿಂಗರಾಯ ಪೂಜಾರ ಪೂಜ್ಯರಿಂದ ಸಂಮಾನ ಸ್ವೀಕರಿಸಿ ಮಾತನಾಡಿದರು. ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಸುರೇಶ ವಿ.ಕುಂಬಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

> ಸರ್ವಜ್ಞನ ತ್ರಿಪದಿಗಳಲ್ಲಿ ಜೀವನ ಮೌಲ್ಯಗಳು ಕುರಿತು ಡಾ. ಅಕ್ಕಮಹಾದೇವಿ ರೊಟ್ಟಿಮಠ ಉಪನ್ಯಾಸ ನೀಡಿ, ಸರ್ವಜ್ಞ ದೊಡ್ಡದಾದ ವಿಶ್ವಕೋಶ. ಸರ್ವಜ್ಞನ ತ್ರಿಪದಿಗಳು ಒಂದು ಸಾಧನೆ. ಸರ್ವಜ್ಞ ಹೇಳದಿರುವ ವಿಷಯಗಳೇ ಇಲ್ಲ. ಪ್ರತಿಯೊಂದು ವಿಚಾರವನ್ನು ಸರ್ವಜ್ಞ ತನ್ನ ತ್ರಿಪದಿಗಳಲ್ಲಿ ತಿಳಿಸಿಕೊಟ್ಟಿದ್ದಾನೆ ಎಂದು ಶ್ರೀಗಳು ನುಡಿದರು.

ಮೃತ್ಯುಂಜಯ ಹಿರೇಮಠ ಮತ್ತು ಗುರುನಾಥ ಸುತಾರ ತಂಡದವರು ವಚನ ಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ವೀಣಾ ಬಿ.ಕಟ್ಟಿ, ವಚನ ಚಿಂತನೆಯನ್ನು ಕೀರ್ತಿ ಎಸ್.ನರಗುಂದ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಕೊಂಡಿದ್ದ ಉಮಾದೇವಿ ಕೋಂ. ಗುರುಸಿದ್ಧಪ್ಪ ಬುಳ್ಳಾನವರ ದಂಪತಿಗಳು ಹಾಗೂ ಪರಿವಾರ ಹುಬ್ಬಳ್ಳಿ ಅವರನ್ನು ಪೂಜ್ಯರು ಸಂಮಾನಿಸಿದರು.

ಸರ್ವರನ್ನು ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್‌ರಾದ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

# ಆಡಳಿತದ ಕ್ರಮಗಳನ್ನು ಸಾರ್ವಜನಿಕರು ಪಾಲಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಾಹನ ಸವಾರರ ಜೀವದ ರಕ್ಷಣೆಯೊಂದಿಗೆ ರಸ್ತೆ ನಿಯಮ ಪಾಲನೆಗಾಗಿ ಪಟ್ಟಣದಲ್ಲಿ ಟ್ರಾಫಿಕ್ ರೂಲ್ಸ್ ಕಡ್ಡಾಯವಾಗಿ ಜಾರಿಗೊಳಿಸಲಾಗುತ್ತಿದೆ. ಪಟ್ಟಣ ಸೇರಿ ಗ್ರಾಮೀಣ ಭಾಗದ ಜನತೆ ಸಹಕಾರ ನೀಡಬೇಕು ಎಂದು ತಹಸೀಲ್ದಾರ ವಾಸುದೇವ ಎಂ ಸ್ವಾಮಿ ಹೇಳಿದರು.

ಅವರು ಪಟ್ಟಣದಲ್ಲಿ ಪಾರ್ಕಿಂಗ್ ವ್ಯವಸ್ಥೆ, ಸುಗಮ ಸಂಚಾರಿ ನಿಯಮ ಪಾಲನೆ ಕುರಿತು ಪೊಲೀಸ್‌ಠಾಣೆಯಲ್ಲಿ ಕೆಲ ವರ್ಷಗಳಿಂದ ಕಾರಣಾಂತರಗಳಿಂದ ನಿರ್ಲಕ್ಷಿಸಲ್ಪಟ್ಟಿದ್ದ ಟ್ರಾಫಿಕ್ ರೂಲ್ಸ್ ಕಟ್ಟುನಿಟ್ಟಾಗಿ ಜಾರಿಗೊಳಿಸುವ ಉದ್ದೇಶದಿಂದ ಕರೆದ ವ್ಯಾಪಾರಸ್ಥರ, ಸಾರ್ವಜನಿಕರ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಪಟ್ಟಣ ತೀವ್ರಗತಿಯಲ್ಲಿ ಬೆಳೆಯುತ್ತಿದ್ದು ಬಹುತೇಕರು ಸಂಚಾರ ನಿಮಯ ಉಲ್ಲಂಘಿಸುತ್ತಿದ್ದಾರೆ. ಇದರಿಂದ ನಿತ್ಯ ಸಾಕಷ್ಟು ಟ್ರಾಫಿಕ್ ಕಿರಿಕಿರಿ ಅನುಭವಿಸುವಂತಾಗಿದೆ. ಈ ಸಮಸ್ಯೆ ಪರಿಹಾರಕ್ಕೆ ಪೊಲೀಸ್ ಮತ್ತು ಪುರಸಭೆಯವರು ಕೈಗೊಳ್ಳುವ ಕ್ರಮಗಳನ್ನು ಸಾರ್ವಜನಿಕರು ಪಾಲಿಸಬೇಕು ಎಂದರು.

ಸಿಪಿಐ ನಾಗರಾಜ ಮಾಡಳ್ಳಿ ಮಾತನಾಡಿ, ಪಟ್ಟಣದ ಮುಖ್ಯ ಬಜಾರ್ ರಸ್ತೆಯಲ್ಲಿನ ವಾಹನ ಸಂಚಾರ ದಟ್ಟಣೆ, ಪಾರ್ಕಿಂಗ್ ಸಮಸ್ಯೆ ನಿವಾರಣೆಯಿಂದ ಸಾರ್ವಜನಿಕರು ಅನುಭವಿಸುವ ತೊಂದರೆ ತಪ್ಪುವ ಜತೆಗೆ ಸಣ್ಣಪುಟ್ಟ ಕಳ್ಳತನ, ತಂಟೆ–ತಕರಾರು ತಪ್ಪುತ್ತದೆ. ದೊಡ್ಡ ಲಾರಿಗಳ ಲೋಡಿಂಗ್ ಅನ್ಲೋಡಿಂಗ್ ರಾತ್ರಿ 9ರಿಂದ ಬೆಳಿಗ್ಗೆ 8ರೊಳಗೆ ಮುಗಿಸಬೇಕು ಎಂದರು.

ಈ ವೇಳೆ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಬಸವೇಶ ಮಹಾಂತಶೆಟ್ಟರ ಮತ್ತು ಅಶೋಕ ಬಟಗುರ್ಕಿ ಮಾತನಾಡಿದರು. ಈ ವೇಳೆ ಪಿಎಸ್‌ಐ ಈರಪ್ಪ ರಿತ್ತಿ, ಕಂದಾಯ ನಿರೀಕ್ಷಕ ಬಸವರಾಜ ಕಾತ್ರಾಳ, ವ್ಯಾಪಾರಸ್ಥರಾದ, ಮಾಲತೇಶ ಅಗಡಿ, ವೈಭವ ಗೋಗಿ, ಆರ್.ಪಿ. ಶಿರಹಟ್ಟಿ, ಎ.ಬಿ. ಬರಿಗಾಲಿ, ಅಭಯ ಜೈನ್, ಕರಣರಾವ್ ಪಟೇಲ್, ಸದಾನಂದ ನಂದೆಣ್ಣವರ, ಅತ್ತಾರ್, ಎಂ.ಎಸ್. ಹಂಜಗಿ, ಕೊತವಾಲ್, ಮಲ್ಲಾರಿ, ಶೇಖಪ್ಪ ಮಾಗಡಿ, ಡಂಬಳ, ಎ.ಎಂ. ಸಂಶಿ, ಸೋಮಪ್ಪ ಗೌರಿ, ಬಸವರಾಜ ಮುಂತಾದವರಿದ್ದರು. ಪೊಲೀಸ್ ಸಿಬ್ಬಂದಿ ಮಾಲತಿ ಸೀಗಿಹಳ್ಳಿ ಸ್ವಾಗತಿಸಿ ನಿರೂಪಿಸಿದರು.

# ಕಣ್ಣಿನ ಆರೋಗ್ಯಕ್ಕೂ ಗಮನ ನೀಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮ ಚಾವಡಿಯಲ್ಲಿ ಇತ್ತೀಚೆಗೆ ಸ್ಥಳೀಯ ಶ್ರೀರಾಮ ಸೇನಾ, ವಿಶ್ವ ಹಿಂದೂ ಪರಿಷತ್, ಭಜರಂಗದಳ, ವಿಶ್ವ ಹಿಂದೂ ಜಾಗರಣ ವೇದಿಕೆ ಹಾಗೂ ಹುಬ್ಬಳ್ಳಿಯ ಜಯಪ್ರಿಯಾ ಹಾಸ್ಪಿಟಲ್ ಇವರ ಸಹಯೋಗದಲ್ಲಿ ಹಿಂದೂ ಧರ್ಮದ ಸಾಮ್ರಾಟ್ ಚಕ್ರವರ್ತಿ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ 397ನೇ ಜಯಂತ್ಯುತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ಉಚಿತ ನೇತ್ರ ತಪಾಸಣಾ ಶಿಬಿರವು ಯಶಸ್ವಿಯಾಗಿ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಲ್ಲಣ್ಣವರ ಮೇಟಿ ಮಾತನಾಡಿ, ಕಣ್ಣು ಮಾನವನ ದೇಹದ ಅತೀ ಸೂಕ್ಷ್ಮವಾದ ಅಂಗ. ಇದನ್ನು ಅತೀ ಜಾಗರೂಕತೆಯಿಂದ ಕಾಪಾಡಿಕೊಳ್ಳಬೇಕು. ಇಂದಿನ ಒತ್ತಡದ ಜೀವನ, ಆಹಾರ ಕ್ರಮದಿಂದ ನಿತ್ಯ ಆರೋಗ್ಯದಲ್ಲಿ ವೈಪರಿತ್ಯ ಕಾಣುತ್ತಿದ್ದೇವೆ. ಪ್ರತಿಯೊಬ್ಬರು ಆರೋಗ್ಯ ರಕ್ಷಣೆಯ ಜತೆಗೆ ಕಣ್ಣಿನ ಆರೋಗ್ಯವನ್ನೂ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಎಂ.ಎಸ್. ಕೋರಿ ಮಾತನಾಡಿ, ಜೀವನದಲ್ಲಿ ಅತ್ಯಮೂಲ್ಯವಾದ ಕಣ್ಣು ಸಂರಕ್ಷಿತವಾಗಿರಬೇಕಾದರೆ ಕಾಲ ಕಾಲಕ್ಕೆ ತಪಾಸಣೆ ಹಾಗೂ ಕಾಳಜಿ ವಹಿಸುವುದು ಬಹುಮುಖ್ಯ ಎಂದರು.

ವೇದಿಕೆಯ ಮೇಲೆ ವೀರಯ್ಯ ಹಿರೇಮಠ, ಶೇಖರಪ್ಪ ಆದಿ, ಎಸ್. ವಾಯ್. ಬೂದಿಹಾಳ, ಅಶೋಕಪ್ಪ ಯಾವಗಲ್ಲ, ಸಂದೇಶ ದೊಡ್ಡಮೇಟಿ, ಜಯಪ್ರಿಯಾ ಆಸ್ಪತ್ರೆಯ ನೇತ್ರ ತಜ್ಞ ವಿನಾಯಕ ಚವಡಿ, ಆನಂದ ಲಟ್ಟಿ ಉಪಸ್ಥಿತರಿದ್ದರು. ಮಿಥುನ್ ಗಾಣಿಗೇರ, ಅನಿಲ ಕಿಟಗೇರಿ, ನಾಗರಾಜ ಕಡಗದ, ಮಂಜುನಾಥ ವಾಲಿ, ಪ್ರವೀಣ ಕೊಪ್ಪದ, ಸಾಗರ ಆದಿ, ಆನಂದ ಕೊಪ್ಪದ, ರಮೇಶ ಆದಿ, ಪ್ರಜ್ವಲ್ ಹಿರೇಮಠ ಸೇರಿದಂತೆ ಇನ್ನು ಅನೇಕರು ಪಾಲ್ಗೊಂಡಿದ್ದರು. ಶಿಬಿರದಲ್ಲಿ 75 ಜನರು ತಮ್ಮ ಕಣ್ಣಿನ ತಪಾಸಣೆ ಮಾಡಿಸಿಕೊಂಡರು. ಶಸ್ತ್ರ ಚಿಕಿತ್ಸೆಗೆ ವೈದ್ಯರಿಂದ ಸೂಚಿಸಲ್ಪಟ್ಟ 50 ಜನರನ್ನು ಹುಬ್ಬಳ್ಳಿಯ ಜಯಪ್ರಿಯಾ ಆಸ್ಪತ್ರೆಗೆ ಉಚಿತ ಶಸ್ತ್ರ ಚಿಕಿತ್ಸೆಗೆ ಬರಲು ಸೂಚಿಸಲಾಯಿತು.




### ರೆಡ್ ಕ್ರಾಸ್ ವತಿಯಿಂದ ಸತ್ಕಾರ ಕಾರ್ಯಕ್ರಮ, ವಿಕಲಚೇತನರಿಗೆ ಸಾಧನ–ಸಲಕರಣೆ ವಿತರಣೆ

# ಆಯುರ್ವೇದ ಶ್ರೇಷ್ಠ ವೈದ್ಯಕೀಯ ಪದ್ಧತಿ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ರೆಡ್ ಕ್ರಾಸ್ ಭವನದಲ್ಲಿ ವಿಕಲಚೇತನರಿಗೆ ಸಾಧನ–ಸಲಕರಣೆ ವಿತರಣೆ ಹಾಗೂ ವಿದೇಶಕ್ಕೆ ಪ್ರಯಾಣ ಬೆಳೆಸುತ್ತಿರುವ ಡಾ. ಎಮ್.ಡಿ. ಸಮುದ್ರಿ ಅವರಿಗೆ ಸನ್ಮಾನ ಕಾರ್ಯಕ್ರಮವನ್ನು ಇತ್ತೀಚೆಗೆ ಏರ್ಪಡಿಸಲಾಗಿತ್ತು.

ಸನ್ಮಾನವನ್ನು ಸ್ವೀಕರಿಸಿ ಡಾ. ಎಮ್.ಡಿ. ಸಮುದ್ರಿ ಮಾತನಾಡಿ, ಆಯುರ್ವೇದವು ಜಗತ್ತಿನಲ್ಲಿ ಶ್ರೇಷ್ಠ ವೈದ್ಯಕೀಯ ಪದ್ಧತಿಯಾಗಿದ್ದು, ಇದನ್ನು ಭಾರತೀಯರಾದ ನಾವು ಉಳಿಸಿ, ಬಳಸಿ ಬೆಳೆಸಲು ಮುಂದಾಗಬೇಕು. ಅಂದಾಗ ಇದಕ್ಕೆ ಅಂತಾರಾಷ್ಟ್ರೀಯ ಮನ್ನಣೆ ದೊರೆಯಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಸಭಾಪತಿ ಡಾ. ಆರ್.ಎನ್. ಗೋಡಬೋಲೆ ಮಾತನಾಡಿ, ಡಾ. ಸಮುದ್ರಿ ಅವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಉಪನ್ಯಾಸಕರಾಗಿ ಈಜಿಪ್ಟ್ ದೇಶಕ್ಕೆ ಹೋಗುತ್ತಿರುವುದು ರೆಡ್ ಕ್ರಾಸ್ ಸಂಸ್ಥೆಗೆ ಹೆಮ್ಮೆಯ ವಿಷಯವಾಗಿದ್ದು, ಅವರು ಆಯುರ್ವೇದ ಕ್ಷೇತ್ರಕ್ಕೆ ಇನ್ನೂ ಹೆಚ್ಚಿನ ಕೊಡುಗೆ ನೀಡಿ ಉತ್ತರೋತ್ತರವಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು.

ಡಾ. ಮಹಮ್ಮದಅಶ್ರಫ್ ದಸ್ತಗೀರಸಾಬ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ವಿಕಲಚೇತನರಿಗೆ ಪಿ & ಓ ತಂತ್ರಜ್ಞರಾದ ತಸ್ಲಂಅಲಿ ಮುಲ್ಲಾ ತಯಾರಿಸಿದ ಕೃತಕ ಕಾಲು ಹಾಗೂ ಶೂ ಮೇಕರ್ ಶಿವಯೋಗಿ ಬೆಳವಡಿ ತಯಾರಿಸಿದ ಸ್ಯಾಂಡಲ್ಸ್‌ಗಳನ್ನು ವಿತರಿಸಲಾಯಿತು. ವೇದಿಕೆಯ ಮೇಲೆ ಸಂಸ್ಥೆಯ ನಜಬೂನ ಸಮುದ್ರಿ, ಸದಸ್ಯರಾದ ಡಾ. ಚಾರುಮತಿ ಗೋಡಬೋಲೆ, ಡಾ. ಸುಮಯ್ಯಾ ಸಮುದ್ರಿ ಉಪಸ್ಥಿತರಿದ್ದರು.

ರೆಡ್ ಕ್ರಾಸ್ ಸಂಸ್ಥೆಯ ಗೌರವ ಖಜಾಂಚಿ ಪ್ರೊ. ಕೆ.ಎಚ್. ಬೇಲೂರ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ನಿಶ್ಚಿತಾ ಬಿ.ಎಲ್ ಪ್ರಾರ್ಥಿಸಿ ವಂದಿಸಿದರು.

ಪ್ರಕಾಶ ಗಾಣಿಗೇರ ನಿರೂಪಿಸಿದರು. ಜಿವಿಮ ಕೇಂದ್ರದ ಸಿಬ್ಬಂದಿಗಳು ಹಾಜರಿದ್ದರು.

**ಪ್ರಮುಖ ರಸ್ತೆಯಲ್ಲಿ ಕಟ್ಟುನಿಟ್ಟಿನ ಏಕಮುಖ ಸಂಚಾರ | ಪುರಸಭೆ, ಪೊಲೀಸ್ ಇಲಾಖೆ ಜಂಟಿ ಕಾರ್ಯ**

# ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಮುಖ್ಯ ಬಜಾರ್ ರಸ್ತೆಯಲ್ಲಿನ ಟ್ರಾಫಿಕ್ ಸಮಸ್ಯೆ ಸರಿಪಡಿಸುವ ನಿಟ್ಟಿನಲ್ಲಿ ಏಕಮುಖ ಸಂಚಾರ ಹಾಗೂ ವಾಹನ ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ವಿವಿಧ ಸಂಚಾರಿ ನಿಯಮಗಳನ್ನು ಜಾರಿಗೆ ತರುವ ಉದ್ದೇಶದಿಂದ ಸೋಮವಾರ ಪುರಸಭೆ ಮತ್ತು ಪೊಲೀಸ್ ಇಲಾಖೆ ಜಂಟಿಯಾಗಿ ರಸ್ತೆಯಲ್ಲಿ ಕಾರ್ಯಾಚರಣೆ ಕೈಗೊಂಡರು.

ಮುಖ್ಯಾಧಿಕಾರಿ ಮಹೇಶ ಹಡಪದ ನೇತೃತ್ವದಲ್ಲಿ ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಪುರಸಭೆ ಸಿಬ್ಬಂದಿಗಳು ಫುಟ್‌ಪಾತ್ ಮೇಲೆ ಇರಿಸಲಾಗಿದ್ದ ಹೆಚ್ಚುವರಿ ವಸ್ತುಗಳನ್ನು ತೆರವುಗೊಳಿಸುವ ಕಾರ್ಯ ಹಾಗೂ ವಾಹನಗಳನ್ನು ಒಂದೆಡೆ ನಿಲ್ಲಿಸುವ ಕಾರ್ಯವನ್ನು ಕೈಗೊಂಡರು.

ಪಟ್ಟಣದ ಮುಖ್ಯ ಬಜಾರ್ ರಸ್ತೆ ನಿತ್ಯ ಜನದಟ್ಟಣೆ, ವಾಹನ ದಟ್ಟಣೆಯಿಂದ ಕೂಡಿರುತ್ತದೆ. ಜಿಲ್ಲೆಯ ಪ್ರಮುಖ ವ್ಯಾಪಾರಿ ಕೇಂದ್ರವಾಗಿರುವ ಪಟ್ಟಣಕ್ಕೆ ತಾಲೂಕಷ್ಟೇ ಅಲ್ಲದೇ ನೆರೆಯ ಕುಂದಗೋಳ, ಶಿಗ್ಗಾಂವ, ಸವಣೂರ, ಶಿರಹಟ್ಟಿ, ಗದಗ ತಾಲೂಕಿನಿಂದ ಸಾವಿರಾರು ಸಂಖ್ಯೆಯಲ್ಲಿ ಜನರು ಬರುತ್ತಾರೆ. ಕಳೆದ ಕೆಲ ವರ್ಷಗಳಿಂದ ಟ್ರಾಫಿಕ್ ಸಮಸ್ಯೆಯು ಬಗ್ಗೆ ಸಂಪೂರ್ಣ ನಿರ್ಲಕ್ಷ್ಯ ಮಾಡಿರುವ ಪುರಸಭೆ ಮತ್ತು ಪೊಲೀಸ್ ಇಲಾಖೆ ರಸ್ತೆ ಅಭಿವೃದ್ಧಿ ಕಾರ್ಯ ಕೈಗೊಂಡು ಫುಟ್‌ಪಾತ್ ತೆರವು ಮತ್ತು ಟ್ರಾಫಿಕ್ ವ್ಯವಸ್ಥೆ ಸರಿಪಡಿಸುವ ದಿಸೆಯಲ್ಲಿ ಕಾರ್ಯ ಕೈಗೊಂಡಿರಲಿಲ್ಲ. ಇದೀಗ ಪುರಸಭೆ ಮತ್ತು ಪೊಲೀಸ್ ಇಲಾಖೆ ಈ ಕಾರ್ಯಕ್ಕೆ ಮುಂದಾಗಿದ್ದು, ಸೋಮವಾರದಿಂದ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಾರ್ವಜನಿಕರಿಗೆ, ಬೀದಿಬದಿ ವ್ಯಾಪಾರಿಗಳಿಗೆ, ವ್ಯಾಪಾರಸ್ಥರಿಗೆ ತಿಳುವಳಿಕೆ ನೀಡುವ ಕಾರ್ಯವನ್ನು ಮಾಡಲಾಯಿತು.

ಸೋಮವಾರ ಪೊಲೀಸ್ ಇಲಾಖೆಯ ಗಮನಕ್ಕೆ ತಂದ ಮುಖ್ಯಾಧಿಕಾರಿಗಳು ತಮ್ಮ ಸಿಬ್ಬಂದಿಗಳು, ಪೌರಕಾರ್ಮಿಕರೊಂದಿಗೆ ಫುಟ್‌ಪಾತ್ ಒತ್ತುವರಿ ತೆರವುಗೊಳಿಸುವ ಕಾರ್ಯ ಕೈಗೊಂಡರು. ಎಲ್ಲೆಂದರಲ್ಲಿ ನಿಲ್ಲಿಸಿದ್ದ ಬೈಕ್, ವಾಹನಗಳನ್ನು ತೆರವುಗೊಳಿಸಿ ರಸ್ತೆಯ ಒಂದು ಬದಿ ನಿಲ್ಲಿಸಿ ಎಚ್ಚರಿಕೆ ನೀಡಲಾಯಿತು. ಕಳೆದ ಮೂರು ದಿನಗಳ ಹಿಂದೆ ಬೀದಿಬದಿ ವ್ಯಾಪಾರಿಗಳು, ವ್ಯಾಪಾರಸ್ಥರ ಸಭೆಯಲ್ಲಿ ಎಲ್ಲರೂ ಸಹಕಾರ ನೀಡುವ ಭರವಸೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಸೋಮವಾರ ಮುಂಜಾನೆಯಿಂದಲೇ ಸಿಬ್ಬಂದಿಗಳು ಕಾರ್ಯಾಚರಣೆಗಿಳಿದು ತಿಳುವಳಿಕೆ ನೀಡಿ, ಎಚ್ಚರಿಸಿದರು.

ಈ ವೇಳೆ ಪುರಸಭೆ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಮಂಜುಳಾ ಹೂಗಾರ, ಶಿವಣ್ಣ ಮ್ಯಾಗೇರಿ, ಬಸವಣ್ಣೆಪ್ಪ ನಂದೆಣ್ಣವರ ಪೊಲೀಸ್ ಸಿಬ್ಬಂದಿ ಪೌರ ಕಾರ್ಮಿಕರು ಇದ್ದರು.



ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ರಸ್ತೆ ಅಭಿವೃದ್ಧಿ ಕಾರ್ಯದಿಂದ ಫುಟ್‌ಪಾತ್ ತೆರವು, ಟ್ರಾಫಿಕ್ ಸಮಸ್ಯೆ ಪರಿಹರಿಸುವಲ್ಲಿ ವಿಳಂಬವಾಗಿತ್ತು. ಇದೀಗ ಮುಖ್ಯ ಬಜಾರ್ ರಸ್ತೆ ಕಾಂಕ್ರೀಟ್ ರಸ್ತೆಯಾಗಿದ್ದು, ಕೂಡಲೇ ಪುರಸಭೆ ಮತ್ತು ಪೊಲೀಸ್ ಇಲಾಖೆಯ ಸಹಭಾಗಿತ್ವದಲ್ಲಿ ವ್ಯಾಪಾರಸ್ಥರ ಸಭೆ ಕರೆದು ಟ್ರಾಫಿಕ್ ಸಮಸ್ಯೆಗೆ ಪರಿಹಾರಕ್ಕಾಗಿ ವಿನಂತಿಸಿದ್ದು ಅದಕ್ಕೆ ಎಲ್ಲರೂ ಸಹಮತ ತಿಳಿಸಿದ್ದರು. ಅದಕ್ಕಾಗಿ ಇಂದಿನಿಂದ ಕಾರ್ಯರೂಪಕ್ಕೆ ತರಲಾಗಿದ್ದು, ಫುಟ್‌ಪಾತ್ ಮೇಲೆ ವ್ಯಾಪಾರಸ್ಥರು ತಮ್ಮ ವಸ್ತುಗಳನ್ನು ಇಟ್ಟುಕೊಳ್ಳುವಂತಿಲ್ಲ. ಟ್ರಾಫಿಕ್ ಸಮಸ್ಯೆ ನಿಯಂತ್ರಣದಲ್ಲಿ ಸಾರ್ವಜನಿಕರು ಮತ್ತು ವ್ಯಾಪಾರಸ್ಥರ ಸಹಕಾರವೂ ಮುಖ್ಯವಾಗಿದೆ ಎಂದು ಹೇಳಿದರು.




## ಮಾ.6ರಿಂದ 8ರವರೆಗೆ ನೀಲಗುಂದದಲ್ಲಿ ಶಿವರಾತ್ರಿ ಉತ್ಸವ

**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಮೀಪದ ನೀಲಗುಂದ ಗ್ರಾಮದ ದಿವ್ಯ ಚೇತನ ಟ್ರಸ್ಟ್ ಜ್ಞಾನಗಿರಿ ಗುದ್ನೇಶ್ವರಮಠದಲ್ಲಿ ಮಾ.6ರಿಂದ 8ವರೆಗೆ ಶಿವರಾತ್ರಿ ಉತ್ಸವ ನೆರವೇರಲಿದೆ.

ಮಾ.6ರಂದು ಬೆಳಿಗ್ಗೆ 9 ಗಂಟೆಗೆ ರಂಗೋಲಿ ಸ್ಪರ್ಧೆ, ಸಾಯಂಕಾಲ 6.30ಕ್ಕೆ ದಿವ್ಯ ಚೇತನ ಆಂಗ್ಲ ಮಾಧ್ಯಮ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಸಾನಿಧ್ಯವನ್ನು ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರಮಾಹಾಸ್ವಾಮಿಗಳು, ಉದ್ಘಾಟನೆಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಂ.ಎ. ರಡ್ಡೇರ ನೆರವೇರಿಸಲಿದ್ದು, ಕೃಷ್ಣಗೌಡ ಪಾಟೀಲ್, ರಾಜು ಕುರಡಗಿ, ಬಿಇಓ ವಿ.ವಿ. ನಡುವಿನಮನಿ, ಸಿಪಿಐ ಸಂಗಮೇಶ ಶಿವಯೋಗಿ, ಉಪ ತಹಸೀಲ್ದಾರ ಎಸ್.ಬಿ.ಸಿಂಪರ್ ಭಾಗವಹಿಸುವರು.

ಮಾ.7ರ ಸಾಯಂಕಾಲ 6.30ಕ್ಕೆ ಸಂತವಾಣಿ ಕಾರ್ಯಕ್ರಮದ ಸಾನಿಧ್ಯವನ್ನು ಮುಳಗುಂದ ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾಸ್ವಾಮಿಜಿ, ನೇತೃತ್ವವನ್ನು ಅಣ್ಣೀಗೇರಿ



ದಾಸೋಹಮಠದ ಶಿವಕುಮಾರ ಮಾಹಾಸ್ವಾಮಿಜಿ, ಧಾರವಾಡ ಮುರುಘಾಮಠದ ಸಚ್ಚಿದಾನಂದ ದೇವರು, ಅಧ್ಯಕ್ಷತೆಯನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ್, ಉದ್ಘಾಟಕರಾಗಿ ಗದಗ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಮುಖ್ಯ ಅತಿಥಿಗಳಾಗಿ ಖ್ಯಾತ ವೈದ್ಯ ಮಹೇಶ ನಾಲವಾಡ, ರಾಮಣ್ಣ ಕಮಾಜಿ,



ಶಿವಪ್ಪ ಕೋಳಿವಾಡ, ಫಕ್ಕೀರೇಶ ಹಿರೇಮನಿ, ಬಸವರಾಜ ಬೆಂಡಿಗೇರಿ, ಅಶೋಕ ಕತ್ತಿ, ಚಿಂಚಲಿ ಗ್ರಾ.ಪಂ.ಅಧ್ಯಕ್ಷ ದೇವಮ್ಮಾ ಬಂಗಾರಿ, ಉಪಾಧ್ಯಕ್ಷೆ ಲಲಿತಾ ಕುರಹಟ್ಟಿ ಪಾಲ್ಗೊಳ್ಳುವರು.

ಮಾ.8ರ ಸಾಯಂಕಾಲ 6.30ಕ್ಕೆ ಮಾಹಾ ಶಿವರಾತ್ರಿ ಕಾರ್ಯಕ್ರಮದ ಸಾನಿಧ್ಯವನ್ನು ಹೊಸಳ್ಳಿ ಬೂದಿಶ್ವರಮಠದ ಬೂದಿಶ್ವರ ಮಾಹಾಸ್ವಾಮಿಜಿ, ಉದ್ಘಾಟನೆಯನ್ನು ಹುಬ್ಬಳ್ಳಿಯ ಶ್ರೇಯಾ ಪ್ರಾಪರ್ಟಿ ಸಿಇಓ ಸೂರಜ ಅಳವಂಡಿ, ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್, ಎಂ.ಡಿ.ಬಟ್ಟೂರ, ಬೆಂಗಳೂರ ಡಿಐಜಿಪಿ ರವಿ ಚನ್ನಣ್ಣವರ, ಅಪ್ಪಣ್ಣಾ ಇನಾಮತಿ, ಎಸ್.ಎಂ. ನೀಲಗುಂದ, ಎಚ್.ಎಂ. ಸಿದ್ದಲಿಂಗಯ್ಯ ಪಾಲ್ಗೊಳ್ಳಲಿದ್ದು, ಗೌರಮ್ಮಾ ಬಡ್ನಿ, ವಿ.ಪಿ. ಹಿರೇಮಠ, ಎಸ್.ಎಲ್. ನೇಕಾರರನ್ನು ಸನ್ಮಾನಿಸಲಾಗುವುದು.

ರಾತ್ರಿ 9 ಗಂಟೆಗೆ ಶಿವರಾತ್ರಿ ಜಾಗರಣೆಯಲ್ಲಿ ಹುಬ್ಬಳ್ಳಿಯ ಆಶೀರ್ವಾದ ನೃತ್ಯ ಕಲಾ ಕೇಂದ್ರದ ವಿದುಷಿ ಶೈಲಾ ಕಟಗಿಯವರಿಂದ ಭರತನಾಟ್ಯ, ಶಹನಾಯ್ ವಾದನ, ಮಲ್ಲಿಕಾರ್ಜುನ ಭಜಂತ್ರಿಯವರಿಂದ ವಾಯಲಿನ್ ವಾದನ, ನಾರಾಯಣ ಹಿರೇಕೊಳಚಿ, ಮಲ್ಲಪ್ಪ ಹೊಂಗಲ ಇವರಿಂದ ಹಾಸ್ಯ ಸಂಜೆ, ಸೌಮ್ಯ ಓಸವಾಲ ತಂಡದವರಿಂದ ಸಂಗೀತ ಕಾರ್ಯಕ್ರಮ ಜರಗುವುದು ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಪ್ರಕಟಣೆಗೆ ತಿಳಿಸಿದ್ದಾರೆ.

## ಪೋಲಿಯೊ ಹನಿ ಹಾಕಿಸಿ ಅಂಗವೈಕಲ್ಯತೆ ತಡೆಯೋಣ



**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ರಾಷ್ಟ್ರೀಯ ಪೋಲಿಯೊ ಕಾರ್ಯಕ್ರಮದ ಅಂಗವಾಗಿ ಭಾನುವಾರ ಲಸಿಕಾ ಕಾರ್ಯಕ್ರಮಕ್ಕೆ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, 2011ರಿಂದ ದೇಶದಲ್ಲಿ ಯಾವುದೇ ಪೋಲಿಯೊ ಪ್ರಕರಣ ಕಂಡುಬಂದಿಲ್ಲ. ಹೀಗಾಗಿ ಭಾರತ ದೇಶವು ಪೋಲಿಯೊ ಮುಕ್ತವಾಗಿದೆ. ನಿಮ್ಮ ಮಗುವಿನ ಸಂಪೂರ್ಣ ರಕ್ಷಣೆಯನ್ನು ಖಚಿತಪಡಿಸಿ 1ರಿಂದ 5 ವರ್ಷದೊಳಗಿನ ಮಕ್ಕಳಿಗೆ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸಿ ಮುಂದೆ ಬರಬಹುದಾದ ಅಂಗವಿಕಲತೆಯನ್ನು ತಡೆಯೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಹಾಯಕ ವೈದ್ಯ ಮುತ್ತಣ್ಣ ಹಟ್ಟಿಮನಿ ಮಾತನಾಡಿದರು. ಸಹಾಯಕ ವೈದ್ಯರಾದ ಗಂಗಮ್ಮ ಕುಂಬಾರ, ಸುಶ್ಮಿತಾ ಪೀಟರ್, ಅಂಗನವಾಡಿ ಕಾರ್ಯಕರ್ತರಾದ ಲಕ್ಷ್ಮೀ ವ್ಹಿ.ಇದ್ಲಿ, ಶಂಕ್ರಮ್ಮ ಕೊತಬಾಳ, ವಿದ್ಯಾ ಇದ್ಲಿ, ಆಶಾ ಕಾರ್ಯಕರ್ತೆಯರಾದ ವಿಜಯಲಕ್ಷ್ಮೀ ಉಂಡಿ, ಶಾರವ್ವ ಗೋಂದಿ ಹಾಗೂ ಮಕ್ಕಳು ಪಾಲ್ಗೊಂಡಿದ್ದರು.



**■ ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ರೆಡ್ ಕ್ರಾಸ್ ಹಾಗೂ ಬಾಗಮಾರ ಸೇವಾ ಸಮಿತಿಯಿಂದ ಗಜೇಂದ್ರಗಡ ಪಟ್ಟಣದ ಪುರಸಭೆ ಕಾರ್ಮಿಕರಿಗೆ ಉಚಿತವಾಗಿ ಬಟ್ಟೆ ಸೇರಿ ಇತರ ಸಾಮಾಗ್ರಿಗಳನ್ನು ವಿತರಿಸಲಾಯಿತು. ಈ ವೇಳೆ ಅಶೋಕ ಬಾಗಮಾರ, ಅಜೀತ ಬಾಗಮಾರ, ಅರಿಹಂತ ಬಾಗಮಾರ ಮುಂತಾದವರಿದ್ದರು.

## ಶಿವ ಸ್ಮರಣೆಯಿಂದ ಕಷ್ಟಗಳು ದೂರ

**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮನುಷ್ಯ ಹುಟ್ಟಿನಿಂದ ಸಾಯುವ ತನಕ ಪ್ರೀತಿಯಿಂದ ಒಬ್ಬರಿಗೊಬ್ಬರು ಆಸರೆಯಾಗಿ ನಮ್ಮ ಜೀವನವನ್ನು ಪ್ರೀತಿಯಿಂದ ಜೀವಿಸಿದಾಗ ಬದುಕು ಸುಂದರವಾಗುತ್ತದೆ ಎಂದು ರಾಜಯೋಗಿನಿ ಬ್ರಹ್ಮಕುಮಾರಿ ಡಾ.ಪದ್ಮಾಜಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದ ಆವರಣದಲ್ಲಿ ಮಾಹಾಶಿವರಾತ್ರಿ ಅಂಗವಾಗಿ ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದಿಂದ ಜರುಗಿದ



ದ್ವಾದಶ ಜ್ಯೋರ್ತಿಲಿಂಗ ಉದ್ಘಾಟಿಸಿ ಮಾತನಾಡಿದರು.

ಭಗವಂತ ನಮಗೆ ಎಲ್ಲವನ್ನೂ ನೀಡಿದ್ದಾನೆ. ಈ ಮನುಷ್ಯ ಜನ್ಮದಲ್ಲಿ ಎಲ್ಲರೊಂದಿಗೆ ಪ್ರೀತಿ, ವಿಶ್ವಾಸ ನಂಬಿಕೆಯಿಂದ ಬದುಕಿ ಬಾಳಿದ ಮಹಿನಿಯರು ನಮಗೆಲ್ಲಾ ದಾರಿ ದೀಪವಾಗಿದ್ದು, ಆದಿ ಕಾಲದಿಂದಲೂ ಎಲ್ಲರೂ ಶಿವನ ಆರಾಧನೆಯಿಂದ ತಮ್ಮ ಸುಖ ಜೀವನ ನಡೆಸಿದ್ದಾರೆ. ಶಿವನನ್ನು ನಿತ್ಯ ನೆನೆಯುವುದರಿಂದ ನಮಗೆ ಬಂದ ಕಷ್ಟಗಳು ದೂರವಾಗುತ್ತವೆ ಎಂದರು.

ನೇತೃತ್ವವನ್ನು ರಾಜಯೋಗಿನಿ ಬಿ.ಕೆ. ಶಿವಾನಿ ವಹಿಸಿದ್ದರು. ಅಧ್ಯಕ್ಷತೆಯನ್ನು ಗೌರಮ್ಮಾ ಬಡ್ನಿ ವಹಿಸಿದ್ದರು. ಪ.ಪಂ ಸದಸ್ಯ ಎಸ್.ಸಿ. ಬಡ್ನಿ, ಗೀತಾ ಜಾಧಾವ, ಕವಿತಾ ದೊಟಿಕಲ್, ಪ್ರಕಾಶ ಮದ್ದಿನ, ರಾಜಯೋಗಿನಿ ನಾಗಲಾಂಬಿಕೆ ಅಕ್ಕ, ಸುಮನ್ ಚವಡಿ, ರೈತ ಸಂಘದ ಅಧ್ಯಕ್ಷ ಬಸವರಾಜ ಕರಿಗಾರ ಇದ್ದರು.

## ಪೋಲಿಯೊ ಮುಕ್ತ ಭಾರತ ನಿರ್ಮಿಸೋಣ



**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಭಾರತವನ್ನು ಪೋಲಿಯೊ ಮುಕ್ತವಾಗಿಸಲು ತಪ್ಪದೇ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಿಸಿ ಎಂದು ಪಪಂ ಸದಸ್ಯ ಎಸ್.ಸಿ. ಬಡ್ನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ಪಲ್ಸ್ ಪೋಲಿಯೊ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪೋಲಿಯೊದಿಂದ ಉಂಟಾಗುವ ಅಂಗವಿಕಲತೆಯೊಂದಿಗೆ ಭೀಕರ ಪರಿಣಾಮ ಬೀರಬಹುದಾದ ಈ ಮಾರಕ ರೋಗವನ್ನು ತಡೆಗಟ್ಟಲು 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪಲ್ಸ್ ಪೋಲಿಯೊ ಹನಿಯನ್ನು ಹಾಕಿಸಿ ಪೋಲಿಯೊ ಮುಕ್ತ ಭಾರತ ನಿರ್ಮಿಸಲು ಕೈಜೋಡಿಸಿ ಎಂದರು.

ಮುಳಗುಂದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಪ್ರವೀಣ ತುಪ್ಪದ, ಸಿಬ್ಬಂದಿ ನಜೀರ್ ನದಾಫ್, ಸುಮಿತ್ರಾ ಹೊಂಬಳ, ಅಂಗನವಾಡಿಕಾರ್ಯಕರ್ತೆ ಎಂ.ಎಂ. ಅಬ್ಬುನವರ, ಆರ್.ಎಚ್. ಯಲಿಗಾರ, ಅಂಗನವಾಡಿ ಸಹಾಯಕಿ ರೇಣುಕಾ ಸೊರಟೂರ, ಬಸವರಾಜ ನೀರಜಿಡ್ಡಿ ಇದ್ದರು.

## ಸಂಸ್ಕಾರವಿಲ್ಲದ ಶಿಕ್ಷಣ ಶೂನ್ಯ

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳಿಗೆ ಶಿಕ್ಷಣದೊಂದಿಗೆ ಉತ್ತಮ ಸಂಸ್ಕೃತಿ ಹಾಗೂ ಸಂಸ್ಕಾರವನ್ನು ಕಲಿಸಿರಿ ಎಂದು ಉದ್ಯಮಿ ಬಸವರಾಜ ವಂಕಲಕುಂಟಿ ಹೇಳಿದರು.

ಅವರು ಪಟ್ಟಣದ ಹೊಸ ಬಸ್ ನಿಲ್ದಾಣದ ಎದುರಿನ ಸರ್ಕಾರಿ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಸಂಸ್ಕಾರವಿಲ್ಲದ ಶಿಕ್ಷಣ ಶೂನ್ಯ. ಸಂಸ್ಕಾರವಿಲ್ಲದ ಕಾರಣ ಇಂದು ಹಲವು ಮಕ್ಕಳು ದಾರಿ



ತಪ್ಪುತ್ತಿರುವುದನ್ನು ಕಾಣುತ್ತಿದ್ದೇವೆ. ಉತ್ತಮ ಶಿಕ್ಷಣ ನೀಡಿ ವಿದೇಶಕ್ಕೆ ಮಕ್ಕಳನ್ನು ಕಳುಹಿಸಿ, ಎಲ್ಲ ಸೌಕರ್ಯ ನೀಡಿದರೂ ಇಂದು ಹಲವರು ತಂದೆ-ತಾಯಿಯರನ್ನು ವೃದ್ಧಾಶ್ರಮಕ್ಕೆ ಕಳುಹಿಸುತ್ತಿದ್ದಾರೆ. ಕೆಲವರು ಹೆತ್ತವರು ಸತ್ತಾಗಲೂ ಬರುತ್ತಿಲ್ಲ. ಈ ಮನಸ್ಥಿತಿ ಮುಂದುವರಿದರೆ ಸಮಾಜ ಅಧೋಗತಿಗೆ ಇಳಿಯಲಿದೆ. ಮಕ್ಕಳಿಗೆ ಸಂಸ್ಕಾರ ಕಲಿಸಬೇಕು ಎಂದು ಪಾಲಕರಿಗೆ ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಎಸ್.ಡಿ.ಎಂ.ಸಿ ಅಧ್ಯಕ್ಷ ಆನಂದ ಕೊಟಗಿ ಮಾತನಾಡಿ, ಸರ್ಕಾರಿ ಶಾಲೆಯಲ್ಲಿ ಪಾಠ ಮಾಡುವ ಎಲ್ಲಾ ಶಿಕ್ಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಯಲ್ಲಿ ಕಲಿಸಬೇಕು. ಅನಂತರ ಪರರ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವಂತೆ ಮನವೊಲಿಸಬೇಕು ಎಂದರು.

ಮುಖ್ಯ ಅತಿಥಿ ಅಬ್ಬಿಗೇರಿಯ ಮುಖ್ಯ ಶಿಕ್ಷಕ ಡಿ.ಎಚ್. ಪರಂಗಿ ಮಾತನಾಡಿದರು.

ದಾನಿ ಈರಮ್ಮ ಸೋಮನಗೌಡ್ರ, ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು. ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಶಾಲೆಯ ಮುಖ್ಯೋಪಾಧ್ಯಾಯ ಬಸವರಾಜ ಕುರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮೈಲಾರಪ್ಪ ಚಳ್ಳಮರದ, ರೇಣುಕಾ ಜೋಗಿ, ಪೋತರಾಜ ಮಣ್ಣೊಡ್ಡರ, ಎಸ್.ಎಚ್. ಹಾದಿಮನಿ, ಆರ್.ಡಿ. ತೋಟಗಂಟಿ, ಅಶೋಕ ಬಂಡಿವಡ್ಡರ, ಬಸವ್ವ ಹೊಸಮನಿ, ಜೀವನಬಿ ಲಕ್ಷ್ಮೇಶ್ವರ, ರೇಣುಕಾ ನಡುವಲಕೇರಿ, ಗಂಗವ್ವ ಗೋಡಿ, ಅಬ್ದುಲಗಣಿ ಕುದರಿ, ದೀಪಾ ಈಟಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ನಗರಸಭೆಯ ಆಸ್ತಿ ಉಳ್ಳವರ ಪಾಲಾಗದಿರಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರ ಸಭೆಯ ಆಧೀನದಲ್ಲಿರುವ 34 ಎಕರೆ 32 ಗುಂಟೆ ಆಸ್ತಿ ಮೇಲೆ ಬಿದ್ದಿರುವ ದೃಷ್ಟಿಯಿಂದ ಸಾವಿರಾರು ಕೋಟಿ ರೂಪಾಯಿಗಳ ಆಸ್ತಿ ಉಳ್ಳವರ ಪಾಲಾಗದಿರಲ್ಲಿ ಎಂದು ವಿಶ್ವನಾಥ ಶೀರಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಪ್ರಸಕ್ತ ನಡೆದ ಕರ್ನಾಟಕ ವಿಧಾನಸಭೆ ಅಧಿವೇಶನದಲ್ಲಿ ಗದಗ ಶಾಸಕರು ವಿಶೇಷ ಕಾಳಜಿ ವಹಿಸಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ವಿಧೇಯಕವನ್ನು ರಚಿಸಿ ನಗರ ಸಭೆಯ ಆಸ್ತಿಯ ಮೇಲೆ ವಿಶೇಷ ಆಸಕ್ತಿ ತೋರಿದ ಕಾರ್ಯ ಶ್ಲಾಘನೀಯ.

ಪ್ರಾಧಿಕಾರದ ಹೆಸರಿನಲ್ಲಿ ನಮೂದಾಗಿರುವ ಶಬ್ಧಗಳಗಳನ್ನು ಗಮನಿಸಿದಾಗ ನಗರ ಸಭೆ ಮಾಲೀಕತ್ವದ ಅನೇಕ ಮಳಿಗೆಗಳು ಲಭ್ಯವಿರುವುದು ಕಂಡು ಬರುತ್ತದೆ. ಸಂಸ್ಕೃತಿಗೆ ಸಂಬಂಧಿಸಿದಂತೆ ಈಗಾಗಲೇ ಕನ್ನಡ ಸಾಹಿತ್ಯ ಭವನ, ಪಂ. ಭೀಮಸೇನ ಜೋಶಿ ರಂಗಮಂದಿರ ನಿರ್ಮಾಣವಾಗಿವೆ.

ಒಟ್ಟಾರೆಯಾಗಿ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ವಿಧೇಯಕ ಅವಶ್ಯಕತೆ ಎಷ್ಟು ಮುಖ್ಯವಾಗಿದೆ ಎಂಬುದನ್ನು ಮತ್ತೊಮ್ಮೆ ಪರಿಶೀಲಿಸುವುದು ಅಗತ್ಯ ಮತ್ತು ನಗರ ಸಭೆಯ ಆಸ್ತಿ ಉಳ್ಳವರ ಪಾಲಾಗದೆ ಉಣ್ಣುವವರ ಪಾಲಾದರೆ ಸೂಕ್ತ ಎಂದು ಅರಿವು ಫೌಂಡೇಶನ್ ಅಧ್ಯಕ್ಷ ವಿಶ್ವನಾಥ ಶೀರಿ ಅಭಿಪ್ರಾಯಪಟ್ಟಿದ್ದಾರೆ.

### ಉಲ್ಬಣಿಸುತ್ತಿರುವ ನೀರಿನ ಬವಣೆ | ಜಾಕ್‌ವೆಲ್ ನೀರು ಎತ್ತುವಳಿಗಿಲ್ಲ ಕಡಿವಾಣ

# ಜಿಲ್ಲಾಧಿಕಾರಿಗಳ ಎಚ್ಚರಿಕೆಗೂ ಕಿಮ್ಮತ್ತಿಲ್ಲದಂತಾಯ್ತು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

50 ಸಾವಿರ ಜನಸಂಖ್ಯೆ ಹೊಂದಿರುವ ಲಕ್ಷ್ಮೇಶ್ವರ ಸೇರಿ ಹತ್ತಾರು ಹಳ್ಳಿಗಳಿಗೆ ಕುಡಿಯುವ ನೀರಿಗೆ ತುಂಗಭದ್ರಾ ನದಿಯೇ ಆಧಾರವಾಗಿದೆ. ಆದರೆ ಕಳೆದ 2 ತಿಂಗಳಿಂದ ಕುಡಿಯುವ ನೀರಿಗಾಗಿ ಜನತೆ ಪರಿತಸಪಿಸುತ್ತಿದ್ದರೂ ನೀರೆತ್ತುವ ನದಿ ಪಾತ್ರದಲ್ಲಿ ಅನಧಿಕೃತ ಪಂಪ್‌ಸೆಟ್‌ಗಳು ರಾಜಾರೋಷವಾಗಿ ಕಾರ್ಯ ನಿರ್ವಹಿಸುತ್ತಿವೆ. ಇತ್ತೀಚೆಗೆ ನದಿಗೆ ಅಲ್ಪ ಪ್ರಮಾಣ ನೀರು ಬಿಟ್ಟಿದ್ದರೂ ಆತಂಕ ಮಾತ್ರ ತಪ್ಪಂದಂತಾಗಿದೆ. ಬೇಸಿಗೆ ವೇಳೆ ರೈತರು ಪಂಪ್‌ಸೆಟ್‌ನಿಂದ ನೀರೆತ್ತದಂತೆ ತಡೆಯಬೇಕು ಎಂದು ಜಿಲ್ಲಾಧಿಕಾರಿಗಳು ಲಕ್ಷ್ಮೇಶ್ವರ, ಶಿರಹಟ್ಟಿ ತಾಲೂಕಿನ ಮತ್ತು ನದಿ ವ್ಯಾಪ್ತಿಯ ಸಂಬಂಧಪಟ್ಟ ಎಲ್ಲ ಅಧಿಕಾರಿಗಳಿಗೆ ಖಡಕ್ ನಿರ್ದೇಶನ ನೀಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ.

ಜೀವ ಇದ್ದರೆ ಜೀವನ ಎಂದು ಹೇಳುವ ಅಧಿಕಾರಿಗಳು ಪಂಪ್‌ಸೆಟ್ ತೆರವುಗೊಳಿಸುವ ಕಠಿಣ ನಿರ್ಧಾರ ಕೈಗೊಳ್ಳಲು ಅಷ್ಟಾಗಿ ಆಸಕ್ತಿ ತೋರದ್ದರಿಂದ 10 ಹೆಚ್‌ಪಿ ಸಾಮರ್ಥ್ಯದ ಹತ್ತಾರು ಅಕ್ರಮ ಪಂಪ್‌ಸೆಟ್‌ಗಳು ಜಾಕ್‌ವೆಲ್ ನೀರನ್ನೇ ಹಗಲೂ ರಾತ್ರಿ ಎತ್ತುವಳಿ ಮಾಡುತ್ತಿವೆ. ಪಟ್ಟಣಕ್ಕೆ ತುಂಗಭದ್ರಾ ನದಿಯಿಂದ ಕುಡಿಯುವ ನೀರು ಸರಬರಾಜಾಗುತ್ತಿದೆ. 25 ವರ್ಷಗಳ ಹಿಂದೆ ಪ್ರಾರಂಭವಾದ ನದಿ ನೀರಿನ ಯೋಜನೆ ಹತ್ತಾರು ಸಮಸ್ಯೆಗಳಿಂದಾಮೆಗತಿಯಲ್ಲಿ ಸಾಗುತ್ತಿದ್ದು, ನೀರಿನ ಬವಣೆ ಉಲ್ಬಣಿಸುತ್ತಿದೆ. ಪ್ರತಿ ವರ್ಷ ಬೇಸಿಗೆಯಲ್ಲಂತೂ ನಾಲ್ಕೈದು



ತಿಂಗಳು ನದಿ ನೀರು ಬರಿದಾಗಿ ಪಟ್ಟಣದಲ್ಲಿ ನೀರಿಗೆ ಹಾಹಾಕಾರ ಉಂಟಾಗುವುದು ಸಾಮಾನ್ಯವಾಗಿದೆ. ಮಳೆ ಕೊರತೆ, ಅಂತರ್ಜಲ ಮಟ್ಟ ಕುಸಿತ ಇತ್ಯಾದಿ ಕಾರಣಗಳಿಂದ ರೈತಾಪಿ ಜನರ ಗೋಳಂತೂ ಹೇಳ ತೀರದು. ಈ ಕಾಲದಲ್ಲಿ ಬೋರ್‌ವೆಲ್‌ನ ಸವಳು ನೀರಿಗೂ ಪರದಾಡುವ ಪರಿಸ್ಥಿತಿ ಉಂಟಾಗುತ್ತಿದೆ.

ಪ್ರತಿ ಬೇಸಿಗೆಯಲ್ಲಿ ಸಮಸ್ಯೆ ಉಂಟಾಗುತ್ತಿದ್ದರೂ ಜನಪ್ರತಿನಿಧಿಗಳು, ಅಧಿಕಾರಿಗಳು ಮಾತ್ರ ಕಂಡೂ ಕಾಣದಂತೆ ಜಾಣ ಕುರುಡುತನ ವಹಿಸಿದ್ದಾರೆ. ನದಿಯಿಂದ ನೀರೆತ್ತುವ ಜಾಕ್‌ವೆಲ್ ಹತ್ತಿರ ನೀರು ಸಂಗ್ರಹಿಸುವ ಯಾವುದೇ ಮುಂಜಾಗ್ರತಾ ಕ್ರಮ ಕೈಗೊಂಡಿಲ್ಲ. ಜಾಕ್‌ವೆಲ್‌ಗೆ ಅನಧಿಕೃತ ಪಂಪ್‌ಸೆಟ್‌ಗಳನ್ನು ಅಳವಡಿಸಿದ್ದರೂ ಯಾರೂ ಕೇಳುವವರಿಲ್ಲ. ಶಾಶ್ವತ ಪರಿಹಾರಕ್ಕೆ ಮತ್ತು ಕೆರೆ ತುಂಬಿಸುವ ಕೋಟ್ಯಾಂತರ ರೂ ಯೋಜನೆ ಸಾಕಾರದ ಬಗ್ಗೆ ಜನಪ್ರತಿನಿಧಿಗಳ, ಅಧಿಕಾರಿಗಳ ನಿರ್ಲಕ್ಷ್ಯ ಮುಂದುವರೆದರೆ ಬೆಳೆಯುತ್ತಿರುವ ಪಟ್ಟಣದ ಜನತೆ ಮತ್ತು ರೈತರು ಜಾನುವಾರುಗಳಿಗೆ ಅಗತ್ಯವಿರುವ ನೀರಿಗಾಗಿ ನಿತ್ಯ ಬಡಿದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಲಿದ್ದು, ಆಡಳಿತ ಇನ್ನಾದರೂ ಎಚ್ಚತ್ತುಕೊಳ್ಳಬೇಕಿದೆ ಎನ್ನುತ್ತಾರೆ ಮಂಜುನಾಥ ಮಾಗಡಿ, ಸುರೇಶ ನಂದೆಣ್ಣವರ ಮುಂತಾದವರು.

> ಗದಗ ಸೇರಿ ಜಿಲ್ಲೆಯ ಲಕ್ಷ್ಮೇಶ್ವರ, ಶಿರಹಟ್ಟಿ, ಮುಂಡರಗಿ ತಾಲೂಕಿಗೆ ತುಂಗಭದ್ರಾ ನದಿ ನೀರೇ ಆಧಾರವಾಗಿದೆ. ಕುಡಿಯುವ ನೀರಿನ ತೊಂದರೆ ತಪ್ಪಿಸಲು ನದಿ ನೀರು ಬಿಟ್ಟಿದ್ದು, ಮಳೆಗಾಲ ಪ್ರಾರಂಭದವರೆಗೂ ನೀರು ಕಾಪಾಡಬೇಕಾಗಿದೆ. ಬೇಸಿಗೆಯಲ್ಲಿ ನದಿ ಪಾತ್ರದ ರೈತರು ಪಂಪ್‌ಸೆಟ್ ಮೂಲಕ ನೀರೆತ್ತುವುದನ್ನು ತಡೆಯ್ವಂತೆ ಆಯಾ ತಾಲೂಕು ಮಟ್ಟದ ಅಧಿಕಾರಿಗಳಿಗೆ ಹತ್ತಾರು ಬಾರಿ ಸೂಚಿಸಿದ್ದೇನೆ. ಈ ಬಗ್ಗೆ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು.
>
> **– ವೈಶಾಲಿ ಎಂ.ಎಲ್.**
> ಜಿಲ್ಲಾಧಿಕಾರಿಗಳು, ಗದಗ.

# ಬಿಜೆಪಿಯಿಂದ ಜಾಗ್ರತಾ ಪಾದಯಾತ್ರೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ರಾಜ್ಯದಲ್ಲಿ ಹೆಚ್ಚುತ್ತಿರುವ ದೇಶ ವಿರೋಧಿ ಕೃತ್ಯಗಳು, ದೇಶ ವಿಭಜನೆಯ ಹೇಳಿಕೆಗಳನ್ನು ಖಂಡಿಸಿ ಜಾಗ್ರತಾ ಪಾದಯಾತ್ರೆಯನ್ನು ನಗರದ ಭೂಮರೆಡ್ಡಿ ಸರ್ಕಲ್‌ನಿಂದ ಟಾಂಗಾಕೂಟವರೆಗೆ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಪಕ್ಕಿರೇಶ್ ರಟ್ಟಿಹಳ್ಳಿ, ಲಿಂಗರಾಜ್ ಪಾಟೀಲ್, ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷೆ ಭಾರತಿ ಅಳವಂಡಿ, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ, ಪಕ್ಷದ ಹಿರಿಯರಾದ ಕಾಂತಿಲಾಲ ಬನ್ಸಾಲಿ, ಸಿದ್ದು ಪಲ್ಲೇದ, ನಗರಸಭಾ ಅಧ್ಯಕ್ಷೆ ಉಷಾ ದಾಸರ, ಇರ್ಷಾದ ಮಾನ್ವಿ, ಅನಿಲ ಅಬ್ಬಿಗೇರಿ, ದೇವಪ್ಪ ಗೊಟೂರ, ಅಶೋಕ ಸಂಕಣ್ಣವರ, ವಿನಾಯಕ ಮಾನ್ವಿ, ನಾಗರಾಜ ತಳವಾರ, ಗಂಗಾಧರ ಹಬೀಬ, ಅಶೋಕ ಕರೂರ, ಅಪ್ಪಣ್ಣ ಟೆಂಗಿನಕಾಯಿ, ಅಶೋಕ ಕರೂರ, ಅಮರನಾಥ ಬೆಟಗೇರಿ, ಶಿವು ಹಿರೇಮನಿಪಾಟಿಲ, ಸುಧೀರ ಕಾಟಿಗರ, ವಿಜಯಲಕ್ಷ್ಮೀ ಶಶಿಧರ ದಿಂಡೂರ, ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ, ವಿದ್ಯಾವತಿ ಗಡಗಿ, ಸಿದ್ರಾಮೇಶ ಹಿರೇಮಠ, ಲಕ್ಷ್ಮೀ ಶಂಕರ ಕಾಕಿ, ಬೂದಪ್ಪ ಹಳ್ಳಿ, ರಮೇಶ ಸಜ್ಜಗಾರ, ರೇಖಾ ಬಂಗಾರಶೆಟ್ಟರ, ಪದ್ಮಿನಿ ಮುತ್ತಲದಿನ್ನಿ, ಶೇಖವ್ವ ಮಾಸರೆಡ್ಡಿ, ಮಾಂತೇಶ ಬಾತಾಖಾನಿ, ವೆಂಕಟೇಶ ಹಬೀಬ, ನವೀನ ಕೊಟೆಕಲ್, ಸುರೇಶ ಮರಳಪ್ಪನವರು, ಸುರೇಶ ಚಿತ್ತರಗಿ, ಶಿವು ಗೊಟೂರ, ಹಾಗೂ ಚುನಾಯಿತ ಪ್ರತಿನಿಧಿಗಳು, ಪ್ರಮುಖರು, ಕಾರ್ಯಕರ್ತರು, ಎಲ್ಲಾ ಮೋರ್ಚಾಗಳ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಮಂತ್ರಿಗಳಾಗಲಿ ಎಂದು ತಮಿಳುನಾಡಿನಿಂದ ದಿಲ್ಲಿಯವರೆಗೆ ಬೈಕ್ ಸವಾರಿ ಕೈಗೊಂಡ ವೀರ ಮಹಿಳೆ ಮಾತಾ ರಾಜಲಕ್ಷ್ಮೀ ಮಂದಾ ಅವರನ್ನು ಸನ್ಮಾನಿಸಲಾಯಿತು.

### ಸಾರ್ವಜನಿಕರು ತಮ್ಮ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಲು ಡಿಸಿ ಕರೆ

# ಪೋಲಿಯೊ ಮುಕ್ತ ಜಿಲ್ಲೆಗೆ ಸಹಕರಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಪೋಲಿಯೊ ಮುಕ್ತ ಜಿಲ್ಲೆಯಾಗಿಸಲು ಸಾರ್ವಜನಿಕರು ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಅವರು ನಗರದ ಹೊಸ ಬಸ್ ನಿಲ್ದಾಣದಲ್ಲಿ ಸೋಮವಾರದಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಹಮ್ಮಿಕೊಳ್ಳಲಾಗಿದ್ದ ವಸ್ತು ಪ್ರದರ್ಶನ ಉದ್ಘಾಟಿಸಿ ನಂತರ ಮಗುವಿಗೆ ಪೋಲಿಯೊ ಲಸಿಕೆ ನೀಡಿ ಮಾತನಾಡಿದರು.

ರಾಷ್ಟ್ರೀಯ ಪಲ್ಸ್ ಪೋಲಿಯೊ ಅಭಿಯಾನದಲ್ಲಿ ಗದಗ ಜಿಲ್ಲೆಯ 0-5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ತಮ್ಮ ಸಮೀಪದ ಲಸಿಕಾ ಕೇಂದ್ರದಲ್ಲಿ ಪೋಲಿಯೊ ಹನಿ ಹಾಕಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ಮೀನಾಕ್ಷಿ ಕೆ.ಎಸ್ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 129327 ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಆ ಪೈಕಿ ಮಾರ್ಚ್ 3 ರವರೆಗೆ 1,20,185 ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಲಾಗಿದೆ. ತಾಲೂಕಾವಾರು ಲಸಿಕೆ ಹಾಕಿದ ವಿವರ ಇಂತಿದೆ: ಗದಗ- 43,059, ಮುಂಡರಗಿ- 13,582, ನರಗುಂದ- 10,124, ರೋಣ- 31,264, ಶಿರಹಟ್ಟಿ- 22,156 ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಜಿಲ್ಲಾ ಅಧ್ಯಕ್ಷರಾದ ರಾಜು ಹೆಬ್ಬಳ್ಳಿ, ವಾರ್ತಾದಿಕಾರಿ ವಸಂತ ಮಡ್ಲೂರ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ಮೀನಾಕ್ಷಿ , ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ, ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಜರಿದ್ದರು.

# ಅಯೋಧ್ಯೆ ಯಾತ್ರೆಯಿಂದ ಹಿಂದಿರುಗಿದ ಗದಗ ಭಕ್ತರು



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಅಯೋಧ್ಯಾ ಶ್ರೀರಾಮ ಭಕ್ತರು ಭಕ್ತರು ಫೆ.28ರಂದು ವಿಶೇಷ ರೈಲಿನ ಮೂಲಕ ಅಯೋಧ್ಯೆಗೆ ತೆರಳಿ ಶ್ರೀ ಬಾಲರಾಮ ದೇವರ ದರ್ಶನ ಭಾಗ್ಯ ಪಡೆದು ವಪಸಾದರು.

ರಾಷ್ಟ್ರದ ಒಗ್ಗಟ್ಟು, ರಾಷ್ಟ್ರೀಯ ಭಾವನೆ, ಗೌರವವನ್ನು ಎತ್ತಿ ಹಿಡಿದು ನ್ಯಾಯಾಲಯದ ತೀರ್ಪಿಗೆ ಅನುಗುಣವಾಗಿ ಶ್ರೀ ಬಾಲರಾಮ ದೇವರ ಪ್ರಾಣ ಪ್ರತಿಷ್ಠೆಯನ್ನು ಮಾಡುವ ಮೂಲಕ ಭಾರತೀಯರ ಹೃದಯ ಮಂದಿರದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ವಿರಾಜಮಾನರಾಗಿದ್ದಾರೆ ಎಂದು ಯಾತ್ರಿಕರು ಕೊಂಡಾಡಿದರು.

ಯಾತ್ರೆಯಲ್ಲಿ ರಾಮ ಭಕ್ತರು, ಭಾಜಪ ಕಾರ್ಯಕರ್ತರು, ಗದಗ ಜಿಲ್ಲೆಯ ಮುಖಂಡರು ಪಾಲ್ಗೊಂಡಿದ್ದರು.

# ಅಂಜುಮನ್ ಸಂಸ್ಥೆಯ ಚುನಾವಣೆ ನಡೆಸುವಂತೆ ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಅಂಜುಮನ್ ಸಂಸ್ಥೆಯ ಚುನಾವಣೆಯನ್ನು ಪ್ರತಿ ಮೂರು ವರ್ಷಕ್ಕೊಮ್ಮೆ ನಡೆಸಬೇಕು. ಆದರೆ ಕಳೆದ ಹಲವು ವರ್ಷಗಳಿಂದ ಸಂಸ್ಥೆಯ ಚುನಾವಣೆ ನಡೆದಿಲ್ಲ. ಕೊನೆಯ ಚುನಾವಣೆ 2009ರಲ್ಲಿ ನಡೆದಿದ್ದು, ಮುಂದೆ ಪ್ರತಿ ಮೂರು ವರ್ಷಗಳ ಅವಧಿಗೆ ಚುನಾವಣೆ ನಡೆದಿಲ್ಲ ಎಂದು ರಾಜ್ಯ ಕೆಪಿಸಿಸಿ ವಿಭಾಗ ಬೆಂಗಳೂರು ಕಾಯದರ್ಶಿ ಯೂಸುಫ ಎನ್.ಡಂಬಳ ಆಕ್ಷೇಪಿಸಿದ್ದಾರೆ.

ಗದಗ ಜಿಲ್ಲೆಯ ರೋಣ, ಲಕ್ಷ್ಮೇಶ್ವರ, ಶಿರಹಟ್ಟಿ, ಹೊಳೆಆಲೂರ, ನರಗುಂದ, ಮುಳಗುಂದ ಹಾಗೂ ವಿವಿಧ ತಾಲೂಕುಗಳಲ್ಲಿ ಅಂಜುಮನ್ ಇಸ್ಲಾಂ ಸಂಸ್ಥೆಗೆ ಪ್ರತಿ ಮೂರು ವರ್ಷಕ್ಕೆ ಸರಿಯಾಗಿ ಚುನಾವಣೆ ನಡೆಯುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳು ಗದಗ ನಗರದ ಅಂಜುಮನ್ ಇಸ್ಲಾಂ ಸಂಸ್ಥೆಗೆ ಕಾನೂನು ರೀತಿಯಲ್ಲಿ ತಕ್ಷಣವೇ ಚುನಾವಣೆ ಮಾಡಬೇಕು ಎಂದು ಪತ್ರಿಕಾ ಪ್ರಕಟಣೆಯ ಮೂಲಕ ಮನವಿ ಮಾಡಿದ್ದಾರೆ.

### ಸಾಲ ಕಟ್ಟುವ ವಿಚಾರವಾಗಿ ಕೌಟುಂಬಿಕ ಕಲಹ

# ಒಂದೇ ಕುಟುಂಬದ ಮೂವರ ಆತ್ಮಹತ್ಯೆ





■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಟ್ರ್ಯಾಕ್ಟರ್ ಮತ್ತು ಇತರೇ ಸಾಲ ಕಟ್ಟುವ ಸಲುವಾಗಿ ಕುಟುಂಬದಲ್ಲಿ ಉಂಟಾದ ಕಲಹ ವಿಕೋಪಕ್ಕೆ ತಿರುಗಿ ಒಂದೇ ಕುಟುಂಬದ ಮೂವರು ಆತ್ಮಹತ್ಯೆ ಮಾಡಿಕೊಂಡ ಘಟನೆ ಸೋಮವಾರ ನಡೆದಿದೆ.

ಲಕ್ಷ್ಮೇಶ್ವರ ತಾಲೂಕಿನ ಗೋವನಾಳ ಗ್ರಾಮದ ರೇಣುಕಾ ತೇಲಿ (49), ಮಂಜುನಾಥ ತೇಲಿ (24) ತಾಯಿ-ಮಗ ಇಬ್ಬರೂ ಸಮೀಪದ ಯಲವಿಗಿ ರೈಲ್ವೆ ನಿಲ್ದಾಣದ ಹತ್ತಿರ ರೇಲ್ವೆ ಹಳಿಗೆ ಬಿದ್ದು ಸಾವನ್ನಪ್ಪಿದ್ದಾರೆ. ಇತ್ತ ವಿಷಯ ತಿಳಿದ ರೇಣುಕಾಳ ತಂಗಿ ಸಾವಕ್ಕ ತೇಲಿ (45) ಮನನೊಂದು ಯಲವಗಿ ಗ್ರಾಮದ ಮನೆಯಲ್ಲಿಯೇ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.

4 ಲಕ್ಷ ರೂ. ಟ್ರ್ಯಾಕ್ಟರ್ ಸಾಲ ಮತ್ತು ಕುಟುಂಬ ನಿರ್ವಹಣೆಗೆ 1.5 ಲಕ್ಷ ಸಾಲವನ್ನು ಕುಟುಂಬಸ್ಥರು ಮಾಡಿಕೊಂಡಿದ್ದರು. ಟ್ರ್ಯಾಕ್ಟರ್ ಸಾಲವನ್ನು ಮರು ಪಾವತಿಸುವ ಸಲುವಾಗಿ ಕುಟುಂಬದಲ್ಲಿ ಕಲಹಗಳು ನಡೆಯುತ್ತಿದ್ದವು. ಇದೇ ವಿಷಯ ಘಟನೆಗೆ ಮೂಲ ಕಾರಣ ಎನ್ನುವ ಶಂಕೆ ವ್ಯಕ್ತವಾಗುತ್ತಿದೆ. ಈ ಕುರಿತು ಹಾವೇರಿ ರೈಲ್ವೆ ಪೊಲೀಸ್ ಹಾಗೂ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಾ.7ರಂದು ಮಹಿಳಾ ಕ್ರೀಡಾಕೂಟ

■ ವಿಜಯಸಾಕ್ಷಿ ಸುದ್ದಿ, ಗದಗ

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಪ್ರಯುಕ್ತ ಮಾರ್ಚ್ 7ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲೆಯ ಮಹಿಳೆಯರಿಗೆ ಕ್ರೀಡಾಕೂಟವನ್ನು ಹಮ್ಮಿಕೊಳ್ಳಲಾಗಿದೆ.

100 ಮೀಟರ್ ಓಟ, ಲಿಂಬು-ಚಮಚ ಓಟ, ವೇಗದ ನಡಿಗೆ ಸ್ಪರ್ಧೆ, ಯೋಗ, ಟೆನ್ನಿಕಾಯಟ್, ಕೇರಂ, ಚೆಸ್ ಬ್ಯಾಡ್ಮಿಂಟನ್ ಸೇರಿದಂತೆ ಒಟ್ಟು 08 ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.

ಈ ಕ್ರೀಡಾಕೂಟದಲ್ಲಿ ಭಾಗವಹಿಸಲು ಆಸಕ್ತಿ ಹೊಂದಿದ ಮಹಿಳಾ ಸ್ಪರ್ಧಿಗಳು ಲಿಂಕ್ https://forms.gle/t8Agoyfj6tq34kd6 ಉಪಯೋಗಿಸಿ ನೋಂದಣಿ ಮಾಡಿಕೊಳ್ಳಲು ಕೋರಲಾಗಿದೆ.

ಗದಗ ಜಿಲ್ಲೆಯ ಮಹಿಳೆಯರಿಗೆ ಮಾತ್ರ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಆನ್‌ಲೈನ್ ಮೂಲಕ ನೋಂದಣಿ ಮಾಡಲು ಕೊನೆಯ ದಿನ ಮಾರ್ಚ್ 6 ಮಧ್ಯಾಹ್ನ 03.00 ಗಂಟೆವರೆಗೆ ಆನಲೈನ್ ಮೂಲಕವೇ ಭರ್ತಿ ಮಾಡಬೇಕು. ಆಫ್‌ಲೈನ್‌ಗೆ ಅವಕಾಶವಿಲ್ಲ.

ಕಡ್ಡಾಯವಾಗಿ ಇಂಗ್ಲೀಷ್ ವರ್ಣಮಾಲೆಯಲ್ಲಿ ಅಕ್ಷರಗಳಲ್ಲಿ ಭರ್ತಿ ಮಾಡಬೇಕು. ಕ್ರೀಡಾಪಟುಗಳು ಸ್ಪರ್ಧೆ ಪ್ರಾರಂಭವಾಗುವ ನಿಗದಿತ ಸಮಯಕ್ಕೆ ಕನಿಷ್ಠ 1 ಗಂಟೆ ಮುಂಚಿತವಾಗಿ ಹಾಜರಿದ್ದು, ಕ್ರೀಡಾ ಸಂಘಟನಾಧಿಕಾರಿಗಳಲ್ಲಿ ಆಧಾರ್ ಗುರುತಿನ ಚೀಟಿ ಹಾಗೂ ವಯಸ್ಸಿನ ದೃಢೀಕರಣದ ದಾಖಲೆಗಳನ್ನು ಹಾಜರುಪಡಿಸಿ ವರದಿ ಮಾಡಿಕೊಳ್ಳತಕ್ಕದ್ದು.

25ರಿಂದ 45ವಯಸ್ಸಿನವರೆಗೆ ಹಾಗೂ 46ರ ಮೇಲ್ಪಟ್ಟ ವಯಸ್ಸಿನ ಸ್ಪರ್ಧಾಳುಗಳಿಗೆ 02 ಗುಂಪುಗಳಲ್ಲಿ ಸ್ಪರ್ಧೆಯನ್ನು ಏರ್ಪಡಿಸಲಾಗುವುದು. ಕ್ರೀಡಾ ತರಬೇತುದಾರರು, ದೈಹಿಕ ಶಿಕ್ಷಕರು, ಪ್ಯಾರಾಮಿಲಿಟರಿ, ಪೊಲೀಸ್, ಆರ್ ಪಿ ಎಫ್, ಅಗ್ನಿಶಾಮಕ ದಳ, ಮಾಜಿ ಸೈನಿಕರು ಮುಂತಾದ ಸಮವಸ್ತ್ರ ಆಧಾರಿತ ಕಾರ್ಯನಿರ್ವಹಿಸುತ್ತಿರುವ/ನಿವೃತ್ತಿ ಪಡೆದ ಮಹಿಳೆಯರು ಭಾಗವಹಿಸಲು ಅರ್ಹರಿರುವುದಿಲ್ಲ.

ಸ್ಪರ್ಧೆಗಳಿಗೆ ಯಾವುದೇ ಪ್ರವೇಶ ಶುಲ್ಕ ಇರುವುದಿಲ್ಲ. ಸ್ಪರ್ಧೆಗೆ ಸೂಕ್ತವಾದ ಬಟ್ಟೆಗಳನ್ನು ಧರಿಸತಕ್ಕದ್ದು. ಒಟ್ಟು 08 ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ಒಬ್ಬರು ಗರಿಷ್ಠ 03 ಸ್ಪರ್ಧೆಗಳಲ್ಲಿ ಭಾಗವಹಿಸಬಹುದಾಗಿದೆ. ನಿರ್ಣಾಯಕರು ಮತ್ತು ನ್ಯಾಯ ನಿರ್ಣಯ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಈ ಫಾರಂನ್ನು ಭರ್ತಿ ಮಾಡಲು ಏನಾದರೂ ತೊಂದರೆಯಾದಲ್ಲಿ ಸುರೇಶ ಸಂಗಮದ ಇವರ ಮೊ.ಸಂ. 9060703554 (ಬೆ. 10 ರಿಂದ ಸಂಜೆ 05.30 ರವರೆಗೆ ) ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಕಟಣೆಯ ತಿಳಿಸಿದೆ.


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**
ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda-gadag@hotmail.com

ಸಂ: ನಅಪ್ರಾಗಬೆ/ಟಿ.ಪಿ.ಎಮ್/ಭೂಬ-/2023-24/ ದಿನಾಂಕ: 04-03-2024

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ ಝಾಕೀರಹುಸೇನ ಮಹಮ್ಮದಬುಡನ್ ಜಮಾದಾರ ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ **14(ಎ)** ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 95/*/1 | 02ಎಕರೆ-20ಗುಂಟೆ ಪೈಕಿ 02ಎಕರೆ-01ಗುಂ | ಕೃಷಿ ವಲಯದಿಂದ | ವಸತಿ |
| 02 | ಗದಗ | 95/*/3 | 01ಎಕರೆ-00ಗುಂಟೆ | ಕೃಷಿ ವಲಯದಿಂದ | ವಸತಿ |
| 03 | ಗದಗ | 95/*/5 | 04ಎಕರೆ-20ಗುಂಟೆ ಪೈಕಿ 00ಎಕರೆ-35ಗುಂಟೆ -08ಆಣೆ | ಕೃಷಿ ವಲಯದಿಂದ | ವಸತಿ |
| | | ಒಟ್ಟು ಕ್ಷೇತ್ರ | 03-ಎಕರೆ-36 ಗುಂಟೆ-08 ಆಣೆ | | |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ ಗದಗ-ಬೆಟಗೇರಿ

ವಾ.ಸಾ.ಇ./ಗದಗ/614/ದೇಶಪಾಂಡೆಪಬ್ಲಿಸಿಟಿ/2023-24



**ಕರ್ನಾಟಕ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಅಭಿಯಂತರವರ ಕಛೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಸಿಂಗಟಾಲೂರು ಏತ ನೀರಾವರಿ ಯೋಜನೆ, ವಿಭಾಗ ನಂ.1, ಮುಂಡರಗಿ, ಗದಗ ಜಿಲ್ಲೆ.
Ph. No. 08371-295016 e-mail: eeslis1mdg@gmail.com

**ಅಲ್ಪಾವಧಿ ಟೆಂಡರ್ ಪ್ರಕಟಣೆ**
**(ONLY THROUGH "*e-Procurement*" SYSTEM)**

**ಉಲ್ಲೇಖ: 1. ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ಸಂಖ್ಯೆ: 2057/2023-24 ದಿನಾಂಕ: 29.02.2024**

ಸಿಂಗಟಾಲೂರು ಏತ ನೀರಾವರಿ ಯೋಜನೆಯ ಎಡದಂಡೆ ಭಾಗದ ಕಾಲುವೆಯು ಗದಗ ಜಿಲ್ಲೆ ಮುಂಡರಗಿ ತಾಲೂಕಿನ ಹಮ್ಮಿಗಿ ಹಾಗೂ ಸಿಂಗಟಾಲೂರ ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ಅರಣ್ಯ ಪ್ರದೇಶದ ಮೂಲಕ ಹಾದೂ ಹೋಗಿದ್ದು, ಹಮ್ಮಿಗಿ ಗ್ರಾಮದ ಸರ್ವೆ ನಂ.161 ಮತ್ತು ಸಿಂಗಟಾಲೂರ ಗ್ರಾಮದ ಸರ್ವೆ ನಂ.134 ಗಳ ಒಟ್ಟು 1.42 ಹೆಕ್ಟೇರ್ ಅರಣ್ಯ ಪ್ರದೇಶಕ್ಕೆ ಅರಣ್ಯ ಇಲಾಖೆಯಿಂದ ತಿರುವಳಿ ಪಡೆಯಲು ಅನುವಾಗುವಂತೆ Consultancy ಸೇವೆ ಪಡೆಯುವ ಕಾಮಗಾರಿಗೆ ಉಲ್ಲೇಖ(1)ರಂತೆ ಅಲ್ಪಾವಧಿ ಟೆಂಡರ್ ಪ್ರಕಟಣೆಯಲ್ಲಿ ಸೂಚಿಸಿರುವಂತೆ, ಅರ್ಹ ಗುತ್ತಿಗೆದಾರರಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ (Work Indent No. 937) ಟೆಂಡರನ್ನು ಆಹ್ವಾನಿಸಲಾಗಿದೆ. ಅದರಂತೆ, ಸದರಿ ಕಾಮಗಾರಿಯ ಟೆಂಡರ್‌ಗೆ ಇಟ್ಟ **ಮೊತ್ತವು (ಜಿ.ಎಸ್.ಟಿ. ಸೇರಿ) ರೂ. 9.97 ಲಕ್ಷ** ಆಗಿರುತ್ತದೆ ಹಾಗೂ ಈ ಕಾಮಗಾರಿಗೆ ಇ.ಎಂ.ಡಿ. **ಮೊತ್ತವು ರೂ.25000/-** ಆಗಿರುತ್ತದೆ.

ಇನ್ನುಳಿದಂತೆ, ಸದರಿ ಟೆಂಡರಿಗೆ ಸಂಬಂಧಿಸಿದ ಷರತ್ತು/ನಿಯಮಾವಳಿಗಳ ಮಾಹಿತಿಯನ್ನು ಕೆಳಗೆ ಸಹಿ ಮಾಡಿರುವ ಅಧಿಕಾರಿಯವರ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ ಹಾಗೂ **ದಿನಾಂಕ:05.03.2024ರ** ನಂತರ "https://kppp.karnataka.gov.in" ವೆಬ್‌ಸೈಟ್‌ನಲ್ಲಿ ಟೆಂಡರ್ ಡಾಕ್ಯೂಮೆಂಟ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬಿಡ್‌ನ್ನು ಸಲ್ಲಿಸಬಹುದಾಗಿರುತ್ತದೆ. ಸದರಿ ಕಾಮಗಾರಿಯ ಟೆಂಡರ್‌ಗೆ ಬಿಡ್ಡನ್ನು ಸಲ್ಲಿಸಲು ಕೊನೆಯ **ದಿನಾಂಕ: 12.03.2024** ಎಂದು ಮತ್ತು ಟೆಂಡರ್ ತಾಂತ್ರಿಕ ಬಿಡ್ಡನ್ನು ತೆರೆಯುವ **ದಿನಾಂಕ: 14.03.2024** ಎಂದು ನಿಗದಿಪಡಿಸಿದೆ. ಇನ್ನಿತರೆ ಹೆಚ್ಚಿನ ಮಾಹಿತಿಯನ್ನು e-procurement Helpdesk Phone No's: +91-80-46010000, +91-80-68948777 ಅನ್ನು ಸಂಪರ್ಕಿಸಿ ಪಡೆಯಬಹುದಾಗಿದೆ. ನಿಬಂಧನೆಗೊಳಪಟ್ಟ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು. ಟೆಂಡರ್‌ಗಳನ್ನು ಸ್ವೀಕರಿಸುವ ಅಧಿಕಾರ ಪಡೆದಿರುವ ಅಧಿಕಾರಿಯು ಎಲ್ಲಾ ಅಥವಾ ಯಾವುದೇ ಟೆಂಡರ್‌ನ್ನು ಕಾರಣ ನೀಡದೆ ತಿರಸ್ಕರಿಸುವ ಅಧಿಕಾರಿವನ್ನು ಹೊಂದಿರುತ್ತಾರೆ.

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಸಿಂಗಟಾಲೂರು ಏತ ನೀರಾವರಿ ಯೋಜನೆ,**
**ನಂ. 1 ವಿಭಾಗ, ಕರ್ನಾಟಕ ನೀರಾವರಿ ನಿಗಮ ನಿಯಮಿತ**
**ಮುಂಡರಗಿ, ಗದಗ ಜಿಲ್ಲೆ.**

ವಾ.ಸಾ.ಇ/ಗದಗ/606/
ದೇಶಪಾಂಡೆಪಬ್ಲಿಸಿಟಿ/2023-24


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka